ಸಂಪುಟ : 11 ಸಂಚಿಕೆ: 19 ಪುಟ : 4+2 ಬೆಲೆ: 3.00 ರವಿವಾರ ಫೆಬ್ರವರಿ 15 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 19 Pages : 4+2 Price : 3.00 Sunday February 15 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಲಕ್ಷ ಫಲಾನುಭವಿಗಳಿಗೆ ಹಕ್ಕುಪತ್ರ ನೀಡುವ ಕಾರ್ಯಕ್ರಮವನ್ನು ಉದ್ಘಾಟಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ

# ನಾವು ಅಸಮಾನತೆ ನೀಗಿಸುವ ಕಾಯಕದಲ್ಲಿ ತೊಡಗಿದ್ದೇವೆ



ಎಲ್ಲ ಜಾತಿ, ಧರ್ಮ, ಭಾಷೆಯ ಜನರಿಗೆ ಸೇರಿದಂತಹ ಎಲ್ಲರನ್ನೊಳಗೊಂಡ ಅಭಿವೃದ್ಧಿಯಲ್ಲಿ ನಮ್ಮ ಸರ್ಕಾರ ನಂಬಿಕೆಯಿರಿಸಿದೆ. ನಾವು ಅಸಮಾನತೆ ನೀಗಿಸುವ ಕಾಯಕದಲ್ಲಿ ತೊಡಗಿದ್ದೇವೆ. ಬಿಜೆಪಿಯವರು 4 ವರ್ಷ ಏನೂ ಮಾಡಿಲ್ಲ. ಬಿಜೆಪಿಯವರ ಮಾತುಗಳನ್ನು ಗಂಭೀರವಾಗಿ ತೆಗೆದುಕೊಳ್ಳುವ ಅಗತ್ಯವಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.



**■ವಿಜಯಸಾಕ್ಷಿ ಸುದ್ದಿ, ಹಾವೇರಿ**

ಕಂದಾಯ ಇಲಾಖೆಯಿಂದ 2ನೇ ಬಾರಿ ಲಕ್ಷ ಫಲಾನುಭವಿಗಳಿಗೆ ಹಕ್ಕುಪತ್ರ ವಿತರಣೆ ಮಾಡುತ್ತಿದ್ದೇವೆ. ಇಲ್ಲಿಯವರೆಗೆ 2.20 ಲಕ್ಷ ಕುಟುಂಬಗಳಿಗೆ ಹಕ್ಕುಪತ್ರ ವಿತರಿಸಿ ದಾಖಲೆ ನಿರ್ಮಿಸಿದ್ದೇವೆ. ರಾಜ್ಯದ ಜಿಡಿಪಿ ದೇಶದಲ್ಲೇ ನಂಬರ್ ಒನ್ ಆಗಿಸಿದ್ದು ನಮ್ಮ ಜನಪರ ಸರ್ಕಾರ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಜಿಲ್ಲಾಡಳಿತ ಮತ್ತು ಕಂದಾಯ ಇಲಾಖೆ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಸರ್ಕರದ ಸಹಸ್ರ ದಿನಾಚರಣೆ ಮತ್ತು ಒಂದು ಲಕ್ಷ ಮಂದಿ ಫಲಾನುಭವಿಗಳಿಗೆ ಹಕ್ಕುಪತ್ರ ನೀಡುವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕಂದಾಯ ಇಲಾಖೆಗೆ ಕೃಷ್ಣಬೈರೇಗೌಡರು ಸಚಿವರಾದ ಮೇಲೆ ಸರ್ಕಾರದಲ್ಲಿ ಕ್ರಾಂತಿಕಾರಿ ಪ್ರಗತಿ ಆಗಿದೆ. ರಾಜ್ಯದ ಜಿಡಿಪಿ ದೇಶದಲ್ಲೇ ನಂಬರ್ ಒನ್ ಆಗಿಸಿದ್ದು ನಮ್ಮ ಜನಪರ ಸರ್ಕಾರ. GST ತೆರಿಗೆ ಸಂಗ್ರಹದಲ್ಲೂ ರಾಜ್ಯ ದಾಖಲೆ ವೇಗದಲ್ಲಿ ಸಾಗುತ್ತಿದೆ. ಈ ಎಲ್ಲಾ ಸಾಧನೆ ಮತ್ತು ದಾಖಲೆಗಳನ್ನು ಕೇಂದ್ರ ಸರ್ಕಾರದ ಅನ್ಯಾಯದ ನಡುವೆಯೂ ಮಾಡಿ ತೋರಿಸಿದ್ದೇವೆ. ಮಾಜಿ ಮುಖ್ಯಮಂತ್ರಿ ಹಾಗೂ ಹಾಲಿ ಸಂಸದ ಬಸವರಾಜ ಬೊಮ್ಮಾಯಿಯವರೂ, ಪ್ರಹ್ಲಾದ್ ಜೋಶಿ, ಜಗದೀಶ್ ಶೆಟ್ಟರ್ ಕೂಡ ರಾಜ್ಯಕ್ಕೆ ಆಗುತ್ತಿರುವ ಅನ್ಯಾಯದ ವಿರುದ್ಧ ಕೇಂದ್ರದಲ್ಲಿ ಬಾಯಿ ಬಿಡುತ್ತಿಲ್ಲ ಎಂದು ಸಿಎಂ ಆಕ್ರೋಶ ವ್ಯಕ್ತಪಡಿಸಿದರು.

ನಮ್ಮ ಸರ್ಕಾರ ಬಂದು 2 ವರ್ಷ 9 ತಿಂಗಳಾಗಿದೆ. ನಾವು ಕೊಟ್ಟ ಭರವಸೆಗಳಲ್ಲಿ 243 ಭರವಸೆಗಳನ್ನು ಈಡೇರಿಸಿದ್ದೇವೆ. ಉಳಿದ ಅವಧಿಯಲ್ಲಿ ಬಾಕಿ ಭರವಸೆಗಳನ್ನೂ ಈಡೇರಿಸಲಾಗುವುದು.

ಅಧಿಕಾರ ಇದ್ದಾಗ ಕೊಟ್ಟ ಭರವಸೆ ಈಡೇರಿಸದ ಬಿಜೆಪಿ ಈಗ ನಮ್ಮ ಖಜಾನೆ ಖಾಲಿ ಆಗಿದೆ ಎನ್ನುವ ಸುಳ್ಳು ಪ್ರಚಾರದಲ್ಲಿ ನಿರತವಾಗಿದೆ.

ಇಲ್ಲಿಯವರೆಗೂ ಗ್ಯಾರಂಟಿಗಳ ಮೂಲಕ 118000 ಕೋಟಿ ರೂಪಾಯಿಗಳನ್ನು ನೇರವಾಗಿ ರಾಜ್ಯದ ಜನರ ಖಾತೆಗೆ ಹಾಕಿದ್ದೇವೆ ಎಂದರು.

ಈ ಸಾವಿರ ದಿನಗಳಲ್ಲಿ ನಮ್ಮ ಸಾಧನಾ ಸಮಾವೇಶ ನಮ್ಮ ಬದ್ಧತೆಯಾಗಿದೆ. ಬಡವರು, ದಲಿತರು, ಹಿಂದುಳಿದ ವರ್ಗದವರು, ಅಲ್ಪಸಂಖ್ಯಾತರು, ಮಹಿಳೆಯರು, ಕಾರ್ಮಿಕರ ಪರವಾಗಿ ನಾವು ನಿಲ್ಲುತ್ತೇವೆ ಎಂದು ಪುನರುಚ್ಚರಿಸಿದರು.

ಜನಸೇವೆಯಲ್ಲಿ ಸಾರ್ಥಕ ಸಾವಿರ ದಿನ, ಭೂ ಗ್ಯಾರಂಟಿ ಸಮರ್ಪಣಾ ಸಮಾವೇಶ ಕಾರ್ಯಕ್ರಮದಲ್ಲಿ ಉತ್ತಮ ಕಾರ್ಯಕ್ಷಮತೆ ತೋರಿದ ಅಧಿಕಾರಿಗಳನ್ನು ಗುರುತಿಸಿ ಸನ್ಮಾನಿಸಲಾಯಿತು. ಡಿಸಿಎಂ ಡಿ.ಕೆ. ಶಿವಕುಮಾರ್, ಸಚಿವರಾದ ಕೃಷ್ಣ ಬೈರೇಗೌಡ, ಶಿವಾನಂದ ಪಾಟೀಲ್, ಹೆಚ್.ಕೆ. ಪಾಟೀಲ್, ಸತೀಶ್ ಜಾರಕಿಹೊಳಿ, ಪರಮೇಶ್ವರ್, ಕೆ.ಹೆಚ್. ಮುನಿಯಪ್ಪ, ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಹೆಚ್.ಎಂ ರೇವಣ್ಣ, ವಿಧಾನ ಪರಿಷತ್ ಆಡಳಿತ ಪಕ್ಷದ ಮುಖ್ಯ ಸಚೇತಕರಾದ ಸಲೀಂ ಅಹ್ಮದ್ ಹಾಗೂ 20ಕ್ಕೂ ಹೆಚ್ಚು ಮಂದಿ ಶಾಸಕರು, ಮುಖಂಡರು, ನಾಯಕರು ಉಪಸ್ಥಿತರಿದ್ದರು.

### ಸುದ್ದಿಗೋಷ್ಠಿಯಲ್ಲಿ ರಾಜ್ಯ ಸರ್ಕಾರದ ವಿರುದ್ಧ ಶಾಸಕ ಸಿ.ಸಿ. ಪಾಟೀಲ ವಾಗ್ದಾಳಿ

# ಸಾವಿರ ದಿನಗಳ ಸಮಾವೇಶ ಅಸಹ್ಯಕರ ಪದ್ಧತಿ




ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ. ನಾಸೀರ್ ಹುಸೇನ್ ಮತ್ತು ಆತನ ಬೆಂಬಲಿಗರು ವಿಧಾನಸೌಧದಲ್ಲಿ ಪಾಕಿಸ್ತಾನ್ ಜಿಂದಾಬಾದ್ ಎಂದಾಗ ಯಾವುದೇ ಕಠಿಣ ಕ್ರಮ ಜರುಗಿಸಲಿಲ್ಲ. ಗೃಹ ಸಚಿವರು ಸಂಪೂರ್ಣ ವೈಫಲ್ಯ ಕಂಡಿದ್ದಾರೆ. ಸಿಎಂ ತವರು ಜಿಲ್ಲೆಯಲ್ಲಿ ಡ್ರಗ್ಸ್ ಫ್ಯಾಕ್ಟರಿಯನ್ನು ಮಹಾರಾಷ್ಟ್ರ ಪೊಲೀಸರು ಪತ್ತೆ ಹಚ್ಚುವಂತಾಗಿದೆ. ನಮ್ಮ ಪೊಲೀಸರಿಗೆ ಸಾಮರ್ಥ್ಯ ಇಲ್ಲ ಎಂದಲ್ಲ, ಸರ್ಕಾರ ಅವರ ಕೈಗಳನ್ನು ಕಟ್ಟಿ ಹಾಕಿದೆ. ಆ ಮೂಲಕ ದೇಶದಲ್ಲಿ ರಾಜ್ಯದ ಪೊಲೀಸರ ಮಾನ ಹರಾಜು ಹಾಕುವ ಕೆಲಸ ಮಾಡುತ್ತಿದೆ ಎಂದು ಶಾಸಕ ಸಿ.ಸಿ. ಪಾಟೀಲ ಹೇಳಿದರು.

**■ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯದ ಕಾಂಗ್ರೆಸ್ ಸರ್ಕಾರವು ಸಾವಿರ ದಿನಗಳ ಆಡಳಿತ ಪೂರೈಸಿದ ಸಂಭ್ರಮದಲ್ಲಿ ನಡೆಸಿದ ಸಮಾವೇಶವು ಸಾಧನೆಗಳ ಸಮಾವೇಶವಲ್ಲ, ಬದಲಾಗಿ ಹಗರಣಗಳ ಸಮಾವೇಶ ಎಂದು ನರಗುಂದ ಶಾಸಕ ಸಿ.ಸಿ. ಪಾಟೀಲ ಆರೋಪಿಸಿದರು.

ಶನಿವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸುಮಾರು 178 ಕೋಟಿ ರೂಪಾಯಿಗಳನ್ನು 700ಕ್ಕೂ ಹೆಚ್ಚು ಖಾತೆಗಳಿಗೆ ಅಕ್ರಮವಾಗಿ ವರ್ಗಾವಣೆ ಮಾಡಲಾಗಿದೆ. ಸ್ವತಃ ಮುಖ್ಯಮಂತ್ರಿ ಸಿದ್ದರಾಮಯ್ಯನವರೇ ವಿಧಾನಸೌಧದಲ್ಲಿ ಇದು 178 ಕೋಟಿ ಅಲ್ಲ, 90 ಕೋಟಿ ರೂಪಾಯಿ ಎಂದು ಒಪ್ಪಿಕೊಂಡಿದ್ದಾರೆ. ಹಣಕಾಸು ಸಚಿವರೂ ಆಗಿರುವ ಮುಖ್ಯಮಂತ್ರಿಗಳಿಗೆ ಇಷ್ಟೊಂದು ದೊಡ್ಡ ಮೊತ್ತದ ಹಣದ ವರ್ಗಾವಣೆ ಬಗ್ಗೆ ಅರಿವಿಲ್ಲ ಎಂದರೆ, ಜನರೇ ಇದನ್ನು ಯಾವ ರೀತಿಯ ಸಾಧನೆ ಎಂದು ತೀರ್ಮಾನಿಸಬೇಕು ಎಂದರು.

ರಾಜ್ಯ ಸರಕಾರ ವಕ್ಫ್ ಮಂಡಳಿಗೆ 4 ಕೋಟಿ ರೂ, 9 ನಿಗಮಗಳಲ್ಲಿ 42 ಕೋಟಿ ರೂ. ದುರ್ಬಳಕೆಯಾಗಿದೆ. 700 ಕೋಟಿ ರೂ.ಗಳ ಅಬಕಾರಿ ಹಗರಣದಿಂದಾಗಿ ಇಬ್ಬರು ಸಚಿವರ ತಲೆದಂಡವಾಗಲಿದೆ. ಬೋವಿ ನಿಗಮದಲ್ಲಿ 60 ಕೋಟಿ ರೂ. ಹಗರಣ ನಡೆದಿದೆ. ಇಷ್ಟೆಲ್ಲಾ ಅವಾಂತರಗಳ ನಡುವೆ ಸರ್ಕಾರ ಯಾವುದಕ್ಕಾಗಿ ಸಂಭ್ರಮಿಸುತ್ತಿದೆ ಎನ್ನುವುದು ಅರ್ಥವಾಗುತ್ತಿಲ್ಲ ಎಂದು ಆರೋಪಿಸಿದರು.

ಆರ್‌ಸಿಬಿ ಸಂಭ್ರಮಾಚರಣೆಯ ವೇಳೆ 11 ಜನರ ಸಾವಿಗೆ ಸರ್ಕಾರದ ಬೇಜವಾಬ್ದಾರಿಯೇ ಕಾರಣ. ರಾಜ್ಯದ ಮುಖ್ಯ ಕಾರ್ಯದರ್ಶಿಗಳು, ಪೊಲೀಸರು ಬಂದೋಬಸ್ತ್ ಮಾಡಲು ಸಾಧ್ಯವಿಲ್ಲ ಎಂದು ಎಚ್ಚರಿಸಿದ್ದರೂ ಸರ್ಕಾರ ಹಠಕ್ಕೆ ಬಿದ್ದವರಂತೆ ಕಾರ್ಯಕ್ರಮಕ್ಕೆ ಅವಕಾಶ ನೀಡಿತು ಎಂದು ಕಿಡಿಕಾರಿದರು. ಸಿದ್ದರಾಮಯ್ಯನವರು ಹಿಂದೆ ಎಸ್‌ಸಿಪಿ ಮತ್ತು ಟಿಎಸ್‌ಪಿ ಕಾಯ್ದೆಯನ್ನು ಜಾರಿಗೆ ತಂದಿದ್ದರು. ಅದನ್ನು ನಾನು ಸ್ವಾಗತಿಸುತ್ತೇನೆ. ಆದರೆ ಇಂದು ಅದೇ ಯೋಜನೆಯ ಹಣವನ್ನು ಗ್ಯಾರಂಟಿ ಯೋಜನೆಗಳ ಹೆಸರಿನಲ್ಲಿ ದುರ್ಬಳಕೆ ಮಾಡಿಕೊಳ್ಳುತ್ತಿದ್ದಾರೆ. ವಸತಿ ಯೋಜನೆಯಲ್ಲಿ ಅಲ್ಪಸಂಖ್ಯಾತರಿಗೆ ಶೇ. 15ರಷ್ಟು ಮೀಸಲಾತಿ ನೀಡಿರುವುದು ಹಾಗೂ ನರೇಗಾ ಯೋಜನೆಯ ಬಗ್ಗೆ ಅಪಪ್ರಚಾರ ಮಾಡುತ್ತಿರುವುದು ಸರ್ಕಾರದ ದ್ವ-ಒದ್ವ ನೀತಿಯನ್ನು ತೋರಿಸುತ್ತದೆ ಎಂದು ದೂರಿದರು. ▸▸2ನೇ ಪುಟಕ್ಕೆ

## ಕನ್ನಡ ಭಾಷಾ ಶಿಕ್ಷಕರ ಕೊರತೆಯಿಂದ ಸರ್ಕಾರಿ ಶಾಲೆಗಳು ಮುಚ್ಚುತ್ತಿವೆ – ಎಸ್.ವಿ. ಸಂಕನೂರ




**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಶಿಕ್ಷಕರ ಕೊರತೆಯಿಂದ ರಾಜ್ಯದಲ್ಲಿ ಸಾವಿರಾರು ಸರ್ಕಾರಿ ಕನ್ನಡ ಶಾಲೆಗಳು ಮುಚ್ಚುತ್ತಿದ್ದು, ಸರ್ಕಾರಿ ಶಾಲೆಗಳು ಉಳಿದರೆ ಮಾತ್ರ ಕನ್ನಡ ಉಳಿಯುತ್ತದೆ. ಈ ನಿಟ್ಟಿನಲ್ಲಿ ಕನ್ನಡ ಸಾಹಿತ್ಯ ಸಮ್ಮೇಳನದಂತಹ ವೇದಿಕೆಗಳ ಮೂಲಕ ರಾಜ್ಯದ ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿ ಹಾಗೂ ಶಿಕ್ಷಣ ಸಚಿವರಿಗೆ ನಿರ್ಣಯ ಮಾಡಿ ಆಗ್ರಹಿಸಬೇಕು ಎಂದು ವಿಧಾನ ಪರಿಷತ್ ಸದಸ್ಯ ಪ್ರೊ. ಎಸ್.ವಿ. ಸಂಕನೂರ ಹೇಳಿದರು.

ಯಳವತ್ತಿ ಗ್ರಾಮದಲ್ಲಿ ನಡೆದ ತಾಲೂಕು ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ 48 ಸಾವಿರ ಕನ್ನಡ ಶಾಲೆಗಳಿದ್ದು, ಕಳೆದ ನಾಲ್ಕು ವರ್ಷಗಳಲ್ಲಿ 3,017 ಸರ್ಕಾರಿ ಶಾಲೆಗಳು ಮುಚ್ಚಿವೆ ಎಂದು ತಿಳಿಸಿದರು. ಅಲ್ಲದೆ, 4,200 ಶಾಲೆಗಳಲ್ಲಿ 10ಕ್ಕಿಂತ ಕಡಿಮೆ ಮಕ್ಕಳು ಮತ್ತು 12,074 ಶಾಲೆಗಳಲ್ಲಿ 20ಕ್ಕಿಂತ ಕಡಿಮೆ ಮಕ್ಕಳು ವಿದ್ಯಾಭ್ಯಾಸ ಮಾಡುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ ಎಂದರು.

ಒಂದೆಡೆ ಸರ್ಕಾರಿ ಕನ್ನಡ ಪ್ರಾಥಮಿಕ ಶಾಲೆಗಳು ಮುಚ್ಚುತ್ತಿದೆಯಾದರೆ, ಮತ್ತೊಂದೆಡೆ ಖಾಸಗಿ ಅನುದಾನರಹಿತ ಕನ್ನಡ ಶಾಲೆಗಳ ಸಂಖ್ಯೆ ▸▸2ನೇ ಪುಟಕ್ಕೆ

## ಕರ್ನಾಟಕದಲ್ಲಿ ಕನ್ನಡವೇ ಸಾರ್ವಭೌಮ ಭಾಷೆಯಾಗಿರಲಿ – ಸರ್ವಾಧ್ಯಕ್ಷೆ ಲಲಿತಕ್ಕ ಅಭಿಮತ




ಕನ್ನಡ ಸಾರಸ್ವತ ಲೋಕಕ್ಕೆ ಪುಲಿಗೆರೆ ಪ್ರದೇಶದ ಕೊಡುಗೆ ಅಪಾರವಾಗಿದೆ. ಸಾಹಿತ್ಯ ಚಟುವಟಿಕೆಗಳಿಗೆ ಪೂರಕ ವಾತಾವರಣವಿರುವ ತಾಲೂಕಿನಲ್ಲಿ ಕನ್ನಡ ಮನಸ್ಸುಗಳು ಒಂದಾಗಿ ತಾಯಿ ಭಾಷೆ, ನೆಲ-ಜಲ ಸಂರಕ್ಷಣೆ ಮತ್ತು ಬೆಳವಣಿಗೆಗಾಗಿ ಸಜ್ಜಾಗಬೇಕು. ಕನ್ನಡಿಗರ ಪ್ರತಿನಿಧಿಕ ಸಂಸ್ಥೆಯಾದ ಕಸಾಪ ಈ ದಿಸೆಯಲ್ಲಿ ಅವಿರತ ಶ್ರಮಿಸುತ್ತಿದೆ ಎಂದು ಹೇಳಿದರು. ಕರ್ನಾಟಕದಲ್ಲಿ ಕನ್ನಡವೇ ಸಾರ್ವಭೌಮ ಭಾಷೆಯಾಗಿ ಮೆರೆಯಬೇಕು. ಕನ್ನಡಕ್ಕೆ ಆ ತಾಕತ್ತು ಮತ್ತು ಸಾಮರ್ಥ್ಯವಿದೆ.

**–ಲಲಿತಕ್ಕ ಕೆರಿಮನಿ, ಸರ್ವಾಧ್ಯಕ್ಷೆ,**
ಕನ್ನಡ ಸಾಹಿತ್ಯ ಸಮ್ಮೇಳನ, ಯಳವತ್ತಿ.

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಕರ್ನಾಟಕ ನೆಲದಲ್ಲಿ ಕನ್ನಡವೇ ಸಾರ್ವಭೌಮ ಭಾಷೆಯಾಗಿರಬೇಕು ಎಂಬುದು ಕೇವಲ ಘೋಷವಾಕ್ಯವಲ್ಲ, ನಾಡಿನ ನಿಜಸ್ವರೂಪವಾಗಬೇಕು ಎಂದು ಲಕ್ಷ್ಮೇಶ್ವರ ತಾಲೂಕು ಎರಡನೇ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷೆ ಲಲಿತಕ್ಕ ಕೆರಿಮನಿ ಅಭಿಪ್ರಾಯಪಟ್ಟರು.

ತಾಲೂಕಿನ ಯಳವತ್ತಿ ಗ್ರಾಮದಲ್ಲಿ ನಡೆದ ಸಮ್ಮೇಳನದ ಉದ್ಘಾಟನಾ ಸಮಾರಂಭದಲ್ಲಿ ಅಧ್ಯಕ್ಷೀಯ ಭಾಷಣ ಮಾಡಿದ ಅವರು, ಕನ್ನಡವು ಕೇವಲ ಒಂದು ಭಾಷೆಯಲ್ಲ; ಅದು ಈ ನೆಲದ ಸಂಸ್ಕೃತಿ, ಸಂಸ್ಕಾರ ಮತ್ತು ಪರಂಪರೆಯನ್ನು ಪ್ರತಿಬಿಂಬಿಸುವ ಶಕ್ತಿ ಎಂದು ಹೇಳಿದರು.

ಪ್ರತಿಯೊಬ್ಬ ಕನ್ನಡಿಗನಲ್ಲೂ ಭಾಷೆಯ ಬಗ್ಗೆ ಅಭಿಮಾನ ಮತ್ತು ಸ್ವಾಭಿಮಾನ ಅಂತರ್ಗತವಾಗಿರಬೇಕು ಎಂದರು. ಪ್ರಾಂತೀಯ ಹೆಸರಿನಲ್ಲಿ ವಿಭಜನೆಯಾಗಿದ್ದ ನಾಡು ಹಾಗೂ ಕನ್ನಡಿಗರನ್ನು ಒಂದೇ ಸೂರಿನಡಿ ಸೇರಿಸಲು ಹೋರಾಡಿದ ಮಹನೀಯರನ್ನು ಆದರ್ಶವಾಗಿಟ್ಟುಕೊಂಡು ನಾಡು-ನುಡಿಯ ರಕ್ಷಣೆಗೆ ಎಲ್ಲರೂ ಬದ್ಧರಾಗಬೇಕು ಎಂದು ಕರೆ ನೀಡಿದರು. ▸▸3ನೇ ಪುಟಕ್ಕೆ

### ಲಕ್ಷ್ಮೇಶ್ವರ ತಾಲೂಕಾ 2ನೇ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ಜ.ಫ. ದಿಂಗಾಲೇಶ್ವರ ಜಗದ್ಗುರುಗಳು

# ಸರಕಾರಿ ಉದ್ಯೋಗದಲ್ಲಿ ಕನ್ನಡಕ್ಕೆ ಪ್ರಥಮಾದ್ಯತೆ ನೀಡಿ



ಕಾರ್ಯಕ್ರಮ ಉದ್ಘಾಟಿಸಿದ ಹಾಗೂ ಸಭೆಯ ಅಧ್ಯಕ್ಷತೆ ವಹಿಸಿದ್ದ ಶಾಸಕ ಡಾ. ಚಂದ್ರು ಲಮಾಣಿ ಮಾತನಾಡಿ, ಕನ್ನಡ ಉಳಿದಿರುವುದು ಗ್ರಾಮೀಣ ಭಾಗದಲ್ಲಿ ಮಾತ್ರ. ಸಾವಿರಾರು ವರ್ಷಗಳ ಭವ್ಯ ಇತಿಹಾಸ ಹೊಂದಿರುವ ಕನ್ನಡ ಭಾಷೆಯ ಬಗ್ಗೆ ಜನರಲ್ಲಿ ಇರುವ ಕೀಳುರಿಮೆ ಕಡಿಮೆಯಾಗಬೇಕು. ಕನ್ನಡ ಭಾಷೆ ಬಗ್ಗೆ ಅಭಿಮಾನವಿರಬೇಕು. ಕನ್ನಡದ ಮಹತ್ವವನ್ನು ಪ್ರತಿಯೊಬ್ಬರಿಗೆ ತಿಳಿಯುವಂತೆ ಮಾಡುವದು ಮುಖ್ಯವಾಗಿದ್ದು, ಪ್ರತಿ ವರ್ಷ ಸಮ್ಮೇಳನ ನಡೆಯುವಂತಾಗಬೇಕು. ಇದಕ್ಕೆ ಪ್ರತಿಯೊಬ್ಬ ಕನ್ನಡಿಗರು ಕೈಜೋಡಿಸಬೇಕಾಗಿದೆ. ತಾಲೂಕು ವ್ಯಾಪ್ತಿಯಲ್ಲಿ ಗ್ರಾಮೀಣ ಭಾಗದಲ್ಲಿ ಸಮ್ಮೇಳನಗಳು ಪ್ರತಿವರ್ಷ ನಡೆದು ಮಹತ್ವ ತಿಳಿಸುವ ಕಾರ್ಯವಾಗಲಿ. ಲಕ್ಷ್ಮೇಶ್ವರದಲ್ಲಿ ಕಸಾಪ ಭವನ ಅರ್ಧಕ್ಕೆ ನಿಂತಿದೆ. ಅದನ್ನು ಪೂರ್ಣಗೊಳಿಸಲು ಎಲ್ಲ ಪ್ರಯತ್ನ ಮಾಡಲಾಗುವುದು ಎಂದರು.

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ/ ಆದಿಕವಿ ಪಂಪ ವೇದಿಕೆ**

ಕನ್ನಡ ಸಾರಸ್ವತ ಲೋಕ-ಕ್ಕೆ ಗದಗ ಜಿಲ್ಲೆಯ ಕೊಡುಗೆ ಅಗ್ರಗಣ್ಯ. ಕರ್ನಾಟಕ ಏಕೀಕರಣ, ನಾಮಕರಣದಲ್ಲಿ ಅಂದಾನೆಪ್ಪ ದೊಡ್ಡಮೇಟಿ, ಹುಯಿಲಗೋಳ ನಾರಾಯಣರಾಯರ ಪಾತ್ರ ಮುಖ್ಯವಾಗಿದೆ ಎಂದು ಶಿರಹಟ್ಟಿ-ಬಾಲೆಹೊಸೂರು ಸಂಸ್ಥಾನ ಪೀಠದ ಜ.ಫಕೀರ ದಿಂಗಾಲೇಶ್ವರ ಜಗದ್ಗುರುಗಳು ಅಭಿಪ್ರಾಯ ವ್ಯಕ್ತಪಡಿಸಿದರು.

ಅವರು ತಾಲೂಕಿನ ಯಳವತ್ತಿ ಗ್ರಾಮದಲ್ಲಿ ಶನಿವಾರ ಲಕ್ಷ್ಮೇಶ್ವರ ತಾಲೂಕಾ 2ನೇ ಕನ್ನಡ ಸಾಹಿತ್ಯ ಸಮ್ಮೇಳನ ದಿವ್ಯ ಸಾನ್ನಿಧ್ಯ ವಹಿಸಿ ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ಕನ್ನಡ ಭಾಷೆ, ನಾಡು, ಜಲ ಇತರೆಲ್ಲ ವಿಷಯದಲ್ಲಿ ನೆರೆ ರಾಜ್ಯಗಳಿಂದ ಸಮಸ್ಯೆಯಾಗುತ್ತಲೇ ಇದೆ. ಆದರೆ ರಾಜ್ಯದೊಳಗಡೆಯೇ ಕನ್ನಡದ ಅಸ್ಮಿತೆಗೆ ಧಕ್ಕೆ ಉಂಟಾಗುತ್ತಿರುವುದು ವಿಷಾದದ ಸಂಗತಿ. ಆಳುವ ಸರಕಾರಗಳ ನೀತಿಯಿಂದ ಕನ್ನಡ ಕಲಿತ ವಿದ್ಯಾರ್ಥಿಗಳು ನಿರುದ್ಯೋಗಿಗಳಾಗುತ್ತಿದ್ದಾರೆ ಮತ್ತು ಇಂಗ್ಲೀಷ್ ಕಲಿತವರು ಉದ್ಯೋಗಿಗಳಾಗುತ್ತಿದ್ದಾರೆ. ಸರಕಾರಿ ಉದ್ಯೋಗದಲ್ಲಿ ಕನ್ನಡಕ್ಕೆ ಪ್ರಥಮ ಆದ್ಯತೆ ನೀಡಬೇಕು. ಮೊದಲು ಕನ್ನಡದ ಬಗ್ಗೆ ಅಭಿಮಾನ ಬೆಳೆಸಿಕೊಳ್ಳಬೇಕು. ಕನ್ನಡ ಭಾಷೆಯ ಬಗ್ಗೆ ಕೀಳರಿಮೆ ಬೇಡ, ಬದಲಾಗಿ ಅಭಿಮಾನ-ಸ್ವಾಭಿಮಾನ ಬೇಕು.

ಸಂಸತ್ತಿನಲ್ಲಿ ಮೊದಲು ಕನ್ನಡ ಭಾಷೆಯಲ್ಲಿ ಮಾತನಾಡಿದ ಕೀರ್ತಿ ಜೆ.ಎಚ್. ಪಟೇಲರು ಮತ್ತು ಇಂದಿರಾಗಾಂಧಿ ಎದುರಿಗೆ ಕುಳಿತು ಸಾವಲು ಹಾಕಿ ಗೆದ್ದ ಲಕ್ಷ್ಮೇಶ್ವರ ತಾಲೂಕಿನ ಶಾಸಕರಾಗಿದ್ದ ದಿ.ಗೂಳಪ್ಪ ಉಪನಾಳ ನಮ್ಮ ಹೆಮ್ಮೆಯಾಗಿದ್ದಾರೆ. ತಾಯಂದಿರು ಮಕ್ಕಳಿಗೆ ಬಾಲ್ಯದಲ್ಲಿಯೇ ಅನ್ಯ ಭಾಷೆಯ ಜ್ಞಾನದ ▸▸3ನೇ ಪುಟಕ್ಕೆ

## ಕನ್ನಡ ಭಾಷಾ ಶಿಕ್ಷಕರ ಕೊರತೆಯಿಂದ ಸರ್ಕಾರಿ ಶಾಲೆಗಳು ಮುಚ್ಚುತ್ತಿವೆ – ಎಸ್.ವಿ. ಸಂಕನೂರ

▶▶ ಮೊದಲನೇ ಪುಟದಿಂದ

ಹೆಚ್ಚುತ್ತಿರುವುದು ಯಕ್ಷಪ್ರಶ್ನೆಯಾಗಿದೆ. ಇದಕ್ಕೆ ಶಿಕ್ಷಕರ ಕೊರತೆಯೇ ಪ್ರಮುಖ ಕಾರಣವಾಗಿದೆ. ಸುಮಾರು 35 ಸಾವಿರ ಪ್ರಾಥಮಿಕ ಶಾಲೆಗಳಲ್ಲಿ ಕನ್ನಡ ಕಲಿಸುವ ಶಿಕ್ಷಕರಿಲ್ಲ. ಅನೇಕರು ನಿವೃತ್ತಿಯಾಗಿದ್ದರೂ ಸರ್ಕಾರ ಹೊಸ ನೇಮಕಾತಿ ಮಾಡಿಲ್ಲ. ತಕ್ಷಣವೇ ಪ್ರಾಥಮಿಕ, ಪ್ರೌಢ ಹಾಗೂ ಕಾಲೇಜು ಹಂತದಲ್ಲಿ ಭಾಷಾ ಶಿಕ್ಷಕರ ನೇಮಕಾತಿ ಮಾಡಬೇಕು ಎಂದು ಒತ್ತಾಯಿಸಿದರು.

ಕನ್ನಡಿಗರಿಗೆ ಅನ್ಯ ಭಾಷೆಗಳ ಜ್ಞಾನ ಅಗತ್ಯವಾದರೂ, ಕನ್ನಡಕ್ಕೆ ಮೊದಲ ಆದ್ಯತೆ ಇರಬೇಕು. ದ್ವಿಭಾಷಾ ಸೂತ್ರ ರಚನೆ ಕುರಿತು ಮುಖ್ಯಮಂತ್ರಿಗಳು ನೀಡಿರುವ ಹೇಳಿಕೆಯ ಬಗ್ಗೆ ಸ್ಪಷ್ಟತೆ ಅಗತ್ಯವಿದೆ. ನಮ್ಮಲ್ಲಿ ಮೊದಲಿನಿಂದಲೂ ಸೂಕ್ತವಾದ ತ್ರಿಭಾಷಾ ಸೂತ್ರವಿದೆ. ಇಂತಹ ವಿಚಾರಗಳ ಬಗ್ಗೆ ಕನ್ನಡ ಸಾಹಿತ್ಯ ಸಮ್ಮೇಳನಗಳಲ್ಲಿ ಚರ್ಚಿಸಿ, ಸರ್ಕಾರದ ಗಮನಕ್ಕೆ ತರಬೇಕು ಎಂದು ಹೇಳಿದರು.

ಕನ್ನಡ ಶಾಲೆಗಳನ್ನು ಉಳಿಸುವಲ್ಲಿ ಪಾಲಕರು ಮತ್ತು ಶಿಕ್ಷಕರಷ್ಟೇ ಅಲ್ಲ, ಸರ್ಕಾರದ ಜವಾಬ್ದಾರಿಯೂ ದೊಡ್ಡದಾಗಿದೆ. ಕನ್ನಡಿಗರು ಈ ವಿಚಾರದಲ್ಲಿ ಆತ್ಮಾವಲೋಕನ ಮಾಡಿಕೊಳ್ಳಬೇಕಾಗಿದೆ ಎಂದು ಸಂಕನೂರ ಅಭಿಪ್ರಾಯಪಟ್ಟರು.

## ಸಾವಿರ ದಿನಗಳ ಸಮಾವೇಶ ಅಸಹ್ಯಕರ ಪದ್ಧತಿ

▶▶ ಮೊದಲನೇ ಪುಟದಿಂದ

ಹಾವೇರಿಯಲ್ಲಿ ನಡೆದ ಸರಕಾರದ ಸಾಧನಾ ಸಮಾವೇಶದಲ್ಲಿ ಮುಖ್ಯಮಂತ್ರಿಗಳು ಮತ್ತು ಉಪಮುಖ್ಯಮಂತ್ರಿಗಳು ಅಕ್ಕಪಕ್ಕದಲ್ಲಿ ಕುಳಿತಿದ್ದರೂ ಪರಸ್ಪರ ಮಾತನಾಡಲಿಲ್ಲ. ಸಿಎಂ ಭಾಷಣ ಶುರುವಾಗುತ್ತಿದ್ದಂತೆ ಡಿ.ಕೆ. ಶಿವಕುಮಾರ್ ಅವರು ವೇದಿಕೆಯಿಂದ ಹೊರನಡೆದರು ಎನ್ನುವುದನ್ನು ಮಾಧ್ಯಮವೊಂದರ ವರದಿಯಿಂದ ಗೊತ್ತಾಗಿದೆ. ಇದು ಅವರ ನಡುವಿನ ಅಸಮಾಧಾನಕ್ಕೆ ಸಾಕ್ಷಿ. ಈ ಸರಕಾರಕ್ಕೆ ಸಾವಿರ ದಿನಗಳ ಕ್ವಾಂಟಿಟಿಗಿಂತ ಆಡಳಿತದ ಕ್ವಾಲಿಟಿ ಮುಖ್ಯ ಎಂಬುದೇ ಮರೆತುಹೋಗಿದೆ. ಸಾವಿರ ದಿನಗಳ ಈ ಸಮಾವೇಶ ಅಸಹ್ಯಕರ ಪದ್ಧತಿ ಎಂದು ಲೇವಡಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ಬಿಜೆಪಿ ಮುಖಂಡರಾದ ಎಂ.ಎಸ್. ಕರಿಗೌಡ್ರ, ಎಂ.ಎಂ. ಹಿರೇಮಠ, ಜಗನ್ನಾಥಸಾ ಭಾಂಡಗೆ ಇತರರು ಉಪಸ್ಥಿತರಿದ್ದರು.

### ಯುವ ಕನಸುಗಳಿಗೆ ಸರ್ಕಾರದ ಬೆಂಬಲ

# ಯುವನಿಧಿಯಿಂದ ಹೊಸ ಭರವಸೆ

ರಾಜ್ಯದ ಯುವ ಸಮುದಾಯದ ಆರ್ಥಿಕ ಭದ್ರತೆ ಹಾಗೂ ಉದ್ಯೋಗ ಅನ್ವೇಷಣೆಯ ಅವಧಿಯಲ್ಲಿ ಸಹಾಯ ಒದಗಿಸುವ ಉದ್ದೇಶದಿಂದ ರಾಜ್ಯ ಸರ್ಕಾರ ಜಾರಿಗೆ ತಂದಿರುವ ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಯುವನಿಧಿ ಪ್ರಮುಖ ಯೋಜನೆಯಾಗಿದೆ. ಪದವಿ ಹಾಗೂ ಡಿಪ್ಲೋಮಾ ಪೂರೈಸಿದ ಯುವಕರಿಗೆ ಉದ್ಯೋಗ ದೊರಕುವವರೆಗೂ ಆರ್ಥಿಕ ನೆರವು ನೀಡುವ ಮೂಲಕ ಅವರ ಆತ್ಮವಿಶ್ವಾಸವನ್ನು ಹೆಚ್ಚಿಸುವುದು ಹಾಗೂ ಸ್ವಾವಲಂಬಿ ಜೀವನಕ್ಕೆ ಪೂರಕ ವಾತಾವರಣ ನಿರ್ಮಿಸುವುದು ಯೋಜನೆಯ ಮೂಲ ಆಶಯವಾಗಿದೆ.

ಶಿಕ್ಷಣ ಪೂರ್ಣಗೊಳಿಸಿದ ಅನೇಕ ಯುವಕರು ಉದ್ಯೋಗ ಹುಡುಕುವ ಅವಧಿಯಲ್ಲಿ ಆರ್ಥಿಕ ಸಂಕಷ್ಟವನ್ನು ಎದುರಿಸುತ್ತಾರೆ. ಈ ಸಮಸ್ಯೆಯನ್ನು ಮನಗಂಡ ಸರ್ಕಾರ, ಯುವಕರಿಗೆ ಮಧ್ಯಂತರ ಆರ್ಥಿಕ ನೆರವು ಒದಗಿಸಿ, ಉದ್ಯೋಗ ಹುಡುಕುವ ಪ್ರಕ್ರಿಯೆಯನ್ನು ಸುಗಮಗೊಳಿಸಲು ಯುವನಿಧಿ ಯೋಜನೆಯನ್ನು ರೂಪಿಸಿದೆ. ಉದ್ಯೋಗ ಸಿಗುವವರೆಗೂ ಯುವಕರಿಗೆ ಕನಿಷ್ಠ ಆರ್ಥಿಕ ಭದ್ರತೆ ಒದಗಿಸುವ ಮೂಲಕ ಅವರು ಕೌಶಲ್ಯಾಭಿವೃದ್ಧಿ, ತರಬೇತಿ ಹಾಗೂ ಸ್ಪರ್ಧಾತ್ಮಕ ಪರೀಕ್ಷೆಗಳ ಸಿದ್ಧತೆಯತ್ತ ಗಮನ ಹರಿಸಲು ನೆರವಾಗುವುದು ಯೋಜನೆಯ ಉದ್ದೇಶ.




ಯುವನಿಧಿ ಯೋಜನೆಯಡಿ ಅರ್ಹ ಪದವೀಧರರಿಗೆ ತಿಂಗಳಿಗೆ 3 ಸಾವಿರ ರೂ ಹಾಗೂ ಡಿಪ್ಲೋಮಾ ಪದವೀಧರರಿಗೆ 1,500 ರೂ ಪ್ರೋತ್ಸಾಹಧನ ನೀಡಲಾಗುತ್ತದೆ. ಶಿಕ್ಷಣ ಪೂರ್ಣಗೊಂಡು 6 ತಿಂಗಳಾದರೂ ಉದ್ಯೋಗ ದೊರಕದ ಯುವಕರಿಗೆ ಈ ನೆರವು ಲಭ್ಯವಾಗುತ್ತದೆ. ಹಣವನ್ನು ನೇರವಾಗಿ ಫಲಾನುಭವಿಗಳ ಬ್ಯಾಂಕ್ ಖಾತೆಗೆ ಜಮಾ ಮಾಡುವ ವ್ಯವಸ್ಥೆ ಇರುವುದರಿಂದ ಪಾರದರ್ಶಕತೆ ಕಾಪಾಡಲಾಗಿದೆ.

ಯುವನಿಧಿ ಯೋಜನೆಗೆ ಅರ್ಜಿ ಸಲ್ಲಿಸಲು ರಾಜ್ಯದ ನಿವಾಸಿಯಾಗಿರಬೇಕು. ಪದವಿ ಅಥವಾ ಡಿಪ್ಲೋಮಾ ಶಿಕ್ಷಣವನ್ನು ರಾಜ್ಯದ ಮಾನ್ಯತೆ ಪಡೆದ ಶಿಕ್ಷಣ ಸಂಸ್ಥೆಯಿಂದ ಪೂರ್ಣಗೊಳಿಸಿರಬೇಕು. ನಿರುದ್ಯೋಗಿಯಾಗಿ ನೋಂದಾಯಿಸಿಕೊಂಡಿರುವ ಯುವಕರು ಆನ್ಲೈನ್ ಮೂಲಕ ಸೇವಾ ಕೇಂದ್ರಗಳು ಅಥವಾ ಸರ್ಕಾರದ ಪೋರ್ಟಲ್ ಮೂಲಕ ಸುಲಭವಾಗಿ ನೋಂದಣಿ ಮಾಡಿಕೊಳ್ಳಬಹುದು.

ಯುವನಿಧಿ ಕೇವಲ ಆರ್ಥಿಕ ನೆರವಲ್ಲ; ಇದು ಯುವಕರಿಗೆ ಮಾನಸಿಕ ಧೈರ್ಯ ನೀಡುವ ಯೋಜನೆಯಾಗಿದೆ. ಕುಟುಂಬದ ಮೇಲಿನ ಆರ್ಥಿಕ ಭಾರವನ್ನು ಕಡಿಮೆ ಮಾಡುವುದರ ಜೊತೆಗೆ, ಯುವಕರು ತಮ್ಮ ವೃತ್ತಿಜೀವನದ ಗುರಿ ಸಾಧನೆಗೆ ಹೆಚ್ಚಿನ ಗಮನ ಹರಿಸಲು ಸಹಕಾರಿ ಆಗುತ್ತಿದೆ. ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತಿ, ಕೌಶಲ್ಯಾಭಿವೃದ್ಧಿ ಕಾರ್ಯಕ್ರಮಗಳಲ್ಲಿ ಭಾಗವಹಿಸುವುದಕ್ಕೆ ಇದು ಪ್ರೇರಣೆ ನೀಡುತ್ತಿದೆ.

ಯೋಜನೆ ಜಾರಿಗೆ ಬಂದ ಬಳಿಕ ಯುವ ಸಮುದಾಯದಲ್ಲಿ ಆಶಾವಾದ ಮೂಡಿದೆ. ನಿರುದ್ಯೋಗದಿಂದ ಉಂಟಾಗುವ ನಿರಾಶೆ ಮತ್ತು ಆತಂಕವನ್ನು ಕಡಿಮೆ ಮಾಡುವಲ್ಲಿ ಯುವನಿಧಿ ಮಹತ್ವದ ಪಾತ್ರ ವಹಿಸುತ್ತಿದೆ. ಶಿಕ್ಷಣ ಪಡೆದ ಯುವಕರು ಉದ್ಯೋಗದತ್ತ ಕೇಂದ್ರೀಕರಿಸುವ ವಾತಾವರಣ ನಿರ್ಮಾಣವಾಗಿದ್ದು, ರಾಜ್ಯದ ಮಾನವ ಸಂಪನ್ಮೂಲ ಅಭಿವೃದ್ಧಿಗೆ ಇದು ಪೂರಕವಾಗಿದೆ.

ಸರಿಯಾದ ರೀತಿಯಲ್ಲಿ ಈ ಯೋಜನೆಯ ಸದುಪಯೋಗ ಪಡೆದುಕೊಂಡರೆ ಯುವಕರು ತಮ್ಮ ಭವಿಷ್ಯವನ್ನು ಭದ್ರಗೊಳಿಸಿಕೊಳ್ಳಲು ಇದು ಪರಿಣಾಮಕಾರಿ ಸಾಧನವಾಗಬಹುದು. ಯೋಜನೆಯ ಬಗ್ಗೆ ಜಾಗೃತಿ ಹೆಚ್ಚಿಸಿ, ಅರ್ಹ ಯುವಕರಿಗೆ ತಲುಪುವಂತೆ ಮಾಡುವಲ್ಲಿ ಸಮಾಜದ ಪ್ರತಿಯೊಬ್ಬರೂ ಕೈಜೋಡಿಸಬೇಕಾಗಿದೆ.

**– ಯುವರಾಜ್ ಎಲಿಗಾರ.**
ಅಪ್ರೆಂಟಿಸ್, ವಾರ್ತಾ ಮತ್ತು ಸಾ.ಸಂ.ಇಲಾಖೆ, ಗದಗ.

> ಯುವಕರಿಗೆ ಶಿಕ್ಷಣದ ಬಳಿಕದ ನಿರುದ್ಯೋಗ ಅವಧಿ ಅತ್ಯಂತ ಸೂಕ್ಷ್ಮ ಹಂತ. ಈ ಸಮಯದಲ್ಲಿ ಆರ್ಥಿಕ ಬೆಂಬಲ ನೀಡುವ ಮೂಲಕ ಅವರ ಆತ್ಮವಿಶ್ವಾಸ ಉಳಿಸುವುದು ಸರ್ಕಾರದ ಜವಾಬ್ದಾರಿ. ಯುವನಿಧಿ ಯೋಜನೆ ಯುವಕರಿಗೆ ಕೇವಲ ಹಣಕಾಸು ನೆರವಲ್ಲ, ಅವರ ಕನಸುಗಳನ್ನು ಸಾಕಾರಗೊಳಿಸುವ ಭರವಸೆಯಾಗಿದೆ.
> **–ಎಚ್.ಕೆ. ಪಾಟೀಲ.**
> ಗದಗ ಜಿಲ್ಲಾ ಉಸ್ತುವಾರಿ ಸಚಿವರು.

ಜಿಲ್ಲೆಯಲ್ಲಿ ಯುವನಿಧಿ ಯೋಜನೆ ಅಡಿಯಲ್ಲಿ ಜನವರಿ-2024ರಿಂದ ಸೆಪ್ಟೆಂಬರ್ 2025ರವರೆಗೆ 6356 ಅರ್ಜಿ ಸ್ವೀಕೃತವಾಗಿದೆ. ಅದರಲ್ಲಿ 4048 ಅರ್ಹ ಫಲಾನುಭವಿಗಳಿಗೆ ಡಿಬಿಟಿ ಮೂಲಕ 15.30 ಕೋಟಿ ರೂ. ವರ್ಗಾವಣೆಯಾಗಿದೆ. ಆ ಪೈಕಿ ತಾಲೂಕುವಾರು ಡಿಬಿಟಿ ಮೂಲಕ ವರ್ಗಾವಣೆಗೊಂಡ ಫಲಾನುಭವಿಗಳ ವಿವರ: ಗದಗ-1432, ಗಜೇಂದ್ರಗಡ-432, ಲಕ್ಷ್ಮೇಶ್ವರ-373, ಮುಂಡರಗಿ-485, ನರಗುಂದ-372, ರೋಣ-612, ಶಿರಹಟ್ಟಿ-342. ಡಿಬಿಟಿ ಮೂಲಕ ಬಾಕಿ ಉಳಿದಿರುವ 2308 ಅಭ್ಯರ್ಥಿಗಳು ಯುವನಿಧಿ ಯೋಜನೆಯ ಷರತ್ತುಗಳಿಗೆ ಹಂತ ಹಂತ ಅರ್ಹರಾಗುತ್ತಾರೆ.

### ದಾನಿಗಳು ಕೊಡಮಾಡಿದ ಕಲಿಕಾ ಸಾಮಗ್ರಿಗಳನ್ನು ಶಾಲೆಗೆ ಹಸ್ತಾಂತರಿಸಿದ ಮಿಥುನ್ ಪಾಟೀಲ

# ಶಾಲೆಗಳಿಗೆ ಕಲಿಕಾ ಸಾಮಗ್ರಿ ದೇಣಿಗೆ ಶ್ಲಾಘನೀಯ




> ಎಟಿ&ಟಿ ಸಂಸ್ಥೆಯ ಆನಂದ ಮಾತನಾಡಿ, ಕರ್ನಾಟಕದಾದ್ಯಂತ ಆಯ್ದ ಶಾಲೆಗಳಿಗೆ ಮಾತ್ರ ಕಲಿಕಾ ಸಾಮಗ್ರಿಗಳನ್ನು ನೀಡುತ್ತಿದ್ದು, ಅದರಲ್ಲಿ ನರೇಗಲ್ಲ ಪಟ್ಟಣದ ಈ ಶಾಲೆಯು ಒಂದಾಗಿದೆ ಎಂದರು.

■ **ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಸರಕಾರಿ ಶಾಲೆಗಳ ಬಗ್ಗೆ ಅಸಡ್ಡೆ ತೋರುತ್ತಿರುವ ಇಂದಿನ ದಿನಗಳಲ್ಲಿ ಅದೇ ಸರಕಾರಿ ಶಾಲೆಗಳಿಗೆ ಪ್ರತಿಷ್ಠಿತ ಕಂಪನಿಗಳ ಸಿಎಸ್ಆರ್ ಫಂಡ್ ಮೂಲಕ ಮಕ್ಕಳಿಗೆ ಕಲಿಕಾ ಸಾಮಗ್ರಿಗಳನ್ನು ದೇಣಿಗೆ ರೂಪದಲ್ಲಿ ನೀಡಿರುವುದು ಶ್ಲಾಘನೀಯ ಎಂದು ರೋಣ ತಾಲೂಕಾ ಗ್ಯಾರಂಟಿ ಸಮಿತಿ ಅಧ್ಯಕ್ಷ ಮಿಥುನ್ ಪಾಟೀಲ ಹೇಳಿದರು.

ಪಟ್ಟಣದ ಕೆಜಿಎಂಎಸ್ ಶಾಲೆಗೆ 2025-26 ವಾರ್ಷಿಕ ಸಿಎಸ್ಆರ್ ಯೋಜನೆಯಡಿಯಲ್ಲಿ ಕೊಡಮಾಡಿದ ಮಕ್ಕಳ ಆಟೋಪಕರಣ ಹಸ್ತಾಂತರಿಸಿ ಅವರು ಮಾತನಾಡಿದರು.

ಸರಕಾರ ಮತ್ತು ಸಾರ್ವಜನಿಕ ಶಿಕ್ಷಣ ಇಲಾಖೆ ಸರಕಾರಿ ಶಾಲಾ ಮಕ್ಕಳಿಗಾಗಿ ಅಕ್ಷರಜ್ಞಾನ ನೀಡುವದರೊಂದಿಗೆ ಅನ್ನ, ಹಣ್ಣು, ಹಾಲು, ಸಮವಸ್ತ್ರ ಸೇರಿದಂತೆ ಎಲ್ಲ ಸೌಲಭ್ಯಗಳನ್ನು ನೀಡುತ್ತಿದೆ. ಅದಕ್ಕೆ ಪೂರಕವಾದ ದಾಖಲಾತಿ ಕಲ್ಪಿಸುವಲ್ಲಿ ಪಾಲಕರು ಹಿಂದೇಟು ಹಾಕುತ್ತಿರುವುದು ನೋವಿನ ಸಂಗತಿಯಾಗಿದೆ. ಮಕ್ಕಳ ಶೈಕ್ಷಣಿಕ ಪ್ರಗತಿಗಾಗಿ ಸರಕಾರೇತರ ಸಂಸ್ಥೆಗಳು ಸಹ ಕೈಜೋಡಿಸುತ್ತಿರುವುದು ಸಂತಸದ ವಿಷಯ ಎಂದರು.

ಅದರಂತೆ ಇಂದು ನರೇಗಲ್ಲ ಪಟ್ಟಣದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಯೂಥ್ ಫಾರ್ ಸೇವಾ ಸಂಸ್ಥೆ ಹಾಗೂ ಸ್ವಗ್ರಾಮ ಫೆಲೋಶಿಪ್ ಸಹಯೋಗದಲ್ಲಿ ಎಟಿ&ಟಿ ಕಂಪನಿಯ ಮುಖ್ಯಸ್ಥರು ಆಗಮಿಸಿ ಗ್ರಂಥಾಲಯಕ್ಕೆ ಪುಸ್ತಕ, ಕಂಪ್ಯೂಟರ್, ಸ್ಮಾರ್ಟ್ ಬೋರ್ಡ್, ವಾಟರ್ ಫಿಲ್ಟರ್ ಸೇರಿ ಸುಮಾರು 12 ಲಕ್ಷ ರೂಪಾಯಿಗಳ ವೆಚ್ಚದಲ್ಲಿ ಕಲಿಕಾ ಸಾಮಗ್ರಿಗಳನ್ನು ಹಸ್ತಾಂತರಿಸಿರುವುದು ಶ್ಲಾಘನೀಯ. ಇಲ್ಲಿನ ನಾಲ್ಕು ಕೊಠಡಿಗಳ ನಿರ್ಮಾಣಕ್ಕೆ ರೋಣ ಶಾಸಕರಾದ ಜಿ.ಎಸ್. ಪಾಟೀಲರು ಅನುದಾನವನ್ನು ನೀಡಿದ್ದು ಅದರ ಕಾರ್ಯ ಪ್ರಗತಿಯಲ್ಲಿದೆ ಎಂದು ತಿಳಿಸಿದರು. ನರೇಗಲ್ಲ ರೈತ ಸಮೃದ್ಧಿ ಕೇಂದ್ರದ ಅಧ್ಯಕ್ಷ ಜಗದೀಶ ಸಂಕನಗೌಡ್ರ ಪ್ರಾಸ್ತಾವಿಕವಾಗಿ ಮಾತನಾಡಿದರು. ಎಸ್‌ಡಿಎಮ್‌ಸಿ ಅಧ್ಯಕ್ಷ ಆನಂದ ಕೊಟಗಿ ಅಧ್ಯಕ್ಷತೆ ವಹಿಸಿದ್ದರು. ಅತಿಥಿಗಳಾಗಿ ಅಕ್ಷಯ ಪಾಟೀಲ, ತಿಮ್ಮರೆಡ್ಡಿ ಬಂಡಿವಡ್ಡರ, ಎಟಿ&ಟಿ ಸಂಸ್ಥೆಯಿಂದ ರಮೇಶ, ವಾಯ್‌ಎಫ್‌ಎಸ್ ವತಿಯಿಂದ ರವಿಶಂಕರ, ಸಂತೋಷ ಶಾನಭಾಗ, ವೀಣಾ, ಶಿರಿಷಚಂದ್ರ ಹಾಗೂ ಸ್ವಗ್ರಾಮ ಕೋ-ಆರ್ಡಿನೇಟರ್ ಗಿರೀಶ ಹಾಗೂ ಸ್ವಗ್ರಾಮ ಮಿತ್ರರು ಉಪಸ್ಥಿತರಿದ್ದರು. ಮುಖ್ಯ ಶಿಕ್ಷಕ ಬಿ.ಬಿ. ಕುರಿ ನಿರ್ವಹಿಸಿದರು.

# ತಂಬಾಕು ಮಾರಾಟದ ಅಂಗಡಿಗಳ ಮೇಲೆ ದಾಳಿ



■ **ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ತಂಬಾಕು ನಿಯಂತ್ರಣ ಕೋಶ, ಆರೋಗ್ಯ ಕೇಂದ್ರ, ಕಂದಾಯ ಇಲಾಖೆ, ಪ.ಪಂ, ಪೊಲೀಸ್ ಇಲಾಖೆ ಜಂಟಿಯಾಗಿ ತಂಬಾಕು ಮಾರಾಟ ಮಾಡುವ ಅಂಗಡಿಗಳ ಮೇಲೆ ದಾಳಿ ನಡೆಸಿ, ದಂಡ ವಸೂಲಿ ಮಾಡಿದರು.

ಈ ವೇಳೆ ರಾಜ್ಯ ತಂಬಾಕು ನಿಷೇಧ ಕೋಶದ ಬೆಳಗಾವಿ ವಿಭಾಗದ ಸಂಯೋಜಕ ಮಾಲತೇಶ ಉಳ್ಳಾಗಡ್ಡಿ ಮಾತನಾಡಿ, ತಂಬಾಕು ಮತ್ತು ತಂಬಾಕು ಉತ್ಪನ್ನಗಳ ಅಧಿನಿಯಮ-200ರ ಪ್ರಕಾರ ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ಮಾಡುವುದು ಅಪರಾಧವಾಗಿದೆ. ಅಂಗಡಿಯ ಮುಂಭಾಗದಲ್ಲಿ ಧೂಮಪಾನ ನಿಷೇಧದ ಬೋರ್ಡ್ ಹಾಕಬೇಕು.

ಅಪ್ರಾಪ್ತರಿಗೆ ತಂಬಾಕು ಉತ್ಪನ್ನಗಳ ಮಾರಾಟ, ಶಾಲಾ-ಕಾಲೇಜುಗಳ 300 ಅಡಿ ಪ್ರದೇಶದ ಮಿತಿಯೊಳಗೆ ತಂಬಾಕು ಉತ್ಪನ್ನಗಳ ಮಾರಾಟ ಹಾಗೂ ಕ್ಯಾನ್ಸರ್ ಕರಾಳತೆಯನ್ನು ಪ್ರತಿಬಿಂಬಿಸುವ ಚಿತ್ರವಿಲ್ಲದ ತಂಬಾಕು ಉತ್ಪನ್ನಗಳ ಪ್ಯಾಕೆಟ್‌ಗಳನ್ನು ಮಾರಾಟ ಮಾಡುವುದು ಅಪರಾಧವಾಗಿದೆ.

ಈ ಬಗ್ಗೆ ಹಲವಾರು ವರ್ಷಗಳಿಂದ ಮಾಹಿತಿ ನೀಡುತ್ತಿದ್ದರೂ, ಸೂಚನೆ ನಿರ್ಲಕ್ಷಿಸಿ, ತಂಬಾಕು ಉತ್ಪನ್ನಗಳ ಮಾರಾಟ ಮಾಡುತ್ತಿರುವುದು ಅಪರಾಧವಾಗಿದೆ. ಮುಂದಿನ ದಿನಗಳಲ್ಲಿ ಹೋಟೇಲ್, ಬಾರ್ ಆ್ಯಂಡ್ ರೆಸ್ಟೋರೆಂಟ್, ತಂಬಾಕು ಮಾರಾಟಗಾರರು ಕಾಯ್ದೆ ಉಲ್ಲಂಘಿಸದಂತೆ ಎಚ್ಚರಿಕೆ ವಹಿಸಬೇಕು ಎಂದರು.

ದಾಳಿಯಲ್ಲಿ 10 ಪ್ರಕರಣಗಳನ್ನು ದಾಖಲಿಸಿಕೊಂಡು 1900 ರೂ ದಂಡ ವಿಧಿಸಲಾಗಿದೆ. ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಕೆ.ಎ. ಹಾದಿಮನಿ, ಜಿಲ್ಲಾ ಸಲಹೆಗಾರ ಗೋಪಾಲ ಸುರಪುರ, ಎಸ್.ಎಸ್. ಅಯ್ಯನಗೌಡ್ರ, ವಿ.ಸಿ. ಚಿತ್ತರಗಿ, ಎಂ.ಎಚ್. ಸೀತಿಮನಿ, ಕೆ.ಎ. ಬೂದಿಹಾಳ, ಮಂಜುನಾಥ ಜಾಲಿಹಾಳ ಸೇರಿದಂತೆ ಇತರರಿದ್ದರು.

# ಅತಿಥಿ ಉಪನ್ಯಾಸಕರಿಗೆ ಹರಿಯಾಣ ಮಾದರಿ ಸೇವಾ ಭದ್ರತೆ ನೀಡಲು ಒತ್ತಾಯ



■ **ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ**

ಅಖಿಲ ಕರ್ನಾಟಕ ಸರ್ಕಾರಿ ಪಾಲಿಟೆಕ್ನಿಕ್ ಅತಿಥಿ ಉಪನ್ಯಾಸಕರಿಗೆ ಹರಿಯಾಣ ಮಾದರಿಯಂತೆ ಸೇವಾ ಭದ್ರತೆ ಕಲ್ಪಿಸಬೇಕು ಎಂದು ಒತ್ತಾಯಿಸಿ, ಎಂಎಲ್‌ಸಿ ಎಸ್.ವಿ. ಸಂಕನೂರ ನೇತೃತ್ವದಲ್ಲಿ ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ. ಸುಧಾಕರ ಅವರಿಗೆ ಮನವಿ ಸಲ್ಲಿಸಲಾಯಿತು.

ಬೆಂಗಳೂರಿನಲ್ಲಿ ಸಚಿವರಿಗೆ ಆಯೋಜಿಸಲಾದ ಗೌರವ ಸಮರ್ಪಣೆ ಹಾಗೂ ಅಭಿನಂದನಾ ಸಮಾರಂಭದಲ್ಲಿ ಸಂಘದ ನಿಯೋಗವು ವಿವಿಧ ಬೇಡಿಕೆಗಳನ್ನು ಮುಂದಿಟ್ಟಿತು.

ಸಂಘದ ಅಧ್ಯಕ್ಷ ಯಶವಂತ ಆರೇರ ಮಾತನಾಡಿ, ಅತಿಥಿ ಉಪನ್ಯಾಸಕರಿಗೆ ಕೆಲಸವೇ ಬದುಕಿನ ಆಧಾರವಾಗಿದೆ. ಅನೇಕರು ವಯೋಮಿತಿ ಮೀರುತ್ತಿದ್ದು, ಭವಿಷ್ಯ ಅನಿಶ್ಚಿತತೆಯಲ್ಲಿದೆ. ಆದ್ದರಿಂದ ರಾಜ್ಯ ಸರ್ಕಾರವು ಹರಿಯಾಣ ಮಾದರಿಯಲ್ಲಿ ಸೇವಾ ಭದ್ರತೆ ನೀಡಬೇಕು. ಮಾನವೀಯ ನೆಲೆಯಲ್ಲಿ ನೆರವಾಗಬೇಕು. ಸದ್ಯ ಪ್ರಸ್ತಾವಿತ 941 ಪಾಲಿಟೆಕ್ನಿಕ್ ಕಾಯಂ ಉಪನ್ಯಾಸಕರ ನೇಮಕಾತಿ ಪ್ರಕ್ರಿಯೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಬೇಕೆಂದು ಒತ್ತಾಯಿಸಿದರು.

ಇದಕ್ಕೆ ಪ್ರತಿಕ್ರಿಯಿಸಿದ ಸಚಿವ ಡಾ.ಎಂ.ಸಿ. ಸುಧಾಕರ, ಅತಿಥಿ ಉಪನ್ಯಾಸಕರನ್ನು ಸರ್ಕಾರ ಕೈಬಿಡುವುದಿಲ್ಲ, ಯಾವುದೇ ಅನ್ಯಾಯವಾಗದಂತೆ ಕ್ರಮ ಕೈಗೊಳ್ಳಲಾಗುವುದು. ಕಾದು ನೋಡಬೇಕೆಂದು ತಿಳಿಸಿದರು.

ಎಂಎಲ್‌ಸಿ ಎಸ್.ವಿ. ಸಂಕನೂರ ಮಾತನಾಡಿ, ಅತಿಥಿ ಉಪನ್ಯಾಸಕರಿಗೆ ಸೇವಾ ಭದ್ರತೆ ಒದಗಿಸುವಂತೆ ಸಚಿವರನ್ನು ಮನವೊಲಿಸಲು ಪ್ರಯತ್ನಿಸಿದರು.

ಸನ್ಮಾನ ಕಾರ್ಯಕ್ರಮ ಅತಿಥಿ ಉಪನ್ಯಾಸಕರಿಗೆ ವೇತನ ಹೆಚ್ಚಳ, ಹೆರಿಗೆ ರಜೆ, ತಿಂಗಳಿಗೆ ಒಂದು ರಜೆ ಸೇರಿದಂತೆ ವಿವಿಧ ಸೌಲಭ್ಯಗಳನ್ನು ಕಲ್ಪಿಸಿರುವ ಹಿನ್ನೆಲೆಯಲ್ಲಿ ಹಾಗೂ ಉನ್ನತ ಶಿಕ್ಷಣ ಕ್ಷೇತ್ರಕ್ಕೆ ನೀಡಿದ ಕೊಡುಗೆಯನ್ನು ಗೌರವಿಸಿ ಸಚಿವ ಡಾ.ಎಂ.ಸಿ. ಸುಧಾಕರ ಅವರನ್ನು ಅಭಿನಂದಿಸಲಾಯಿತು.

ಈ ಸಂದರ್ಭದಲ್ಲಿ ಸಂಘದ ಉಪಾಧ್ಯಕ್ಷ ಪ್ರವೀಣಕುಮಾರ ಬೇವಿನಕಟ್ಟಿ, ವಿನೋದ ಗೊಂದನವಾಡಿ, ಶುಭಂ, ಶ್ರೀಧರ ದಿವಾನದ, ರಾಕೇಶ್ ಕಡಬಿನ, ಅರುಣಕುಮಾರ, ವಿನೋದ ಮರಿನಾಯ್ಕರ್ ಸೇರಿದಂತೆ 500ಕ್ಕೂ ಅಧಿಕ ಅತಿಥಿ ಉಪನ್ಯಾಸಕರು ಭಾಗವಹಿಸಿದ್ದರು.

### ಭಾರತ ರತ್ನ ಭೀಮಸೇನ ಜೋಶಿ ಸ್ವರನಮನ ಕಾರ್ಯಕ್ರಮ

# ಸಂಗೀತ ಆಲಿಸುವಿಕೆಯಿಂದ ಶಾಂತಿ, ನೆಮ್ಮದಿ


■ **ವಿಜಯಸಾಕ್ಷಿ ಸುದ್ದಿ, ಗದಗ**

ಇಂದಿನ ಆಧುನಿಕ, ಧಾವಂತದ ಮತ್ತು ಒತ್ತಡದ ಜೀವನ ಶೈಲಿಯಲ್ಲಿ ಸಂಗೀತ ಆಲಿಸುವಿಕೆಯಿಂದ ನಿಜವಾದ ಶಾಂತಿ, ನೆಮ್ಮದಿ ಪ್ರಾಪ್ತವಾಗುತ್ತದೆ ಎಂದು ಐಎಂಎ ಮಾಜಿ ಅಧ್ಯಕ್ಷರು ಹಾಗೂ ಖ್ಯಾತ ವೈದ್ಯರಾದ ಡಾ. ರಾಧಿಕಾ ಕುಲಕರ್ಣಿ ಹೇಳಿದರು.

ಅವರು ಗದುಗಿನ ಮರಾಠಿ ವಾಙ್ಮಯ ಪ್ರೇಮಿ ಮಂಡಳದಲ್ಲಿ ಇತ್ತೀಚೆಗೆ ಭಾರತರತ್ನ ಭೀಮಸೇನ ಜೋಶಿಯವರ ಪುಣ್ಯಸ್ಮರಣೆಯ ನಿಮಿತ್ತ ಜರುಗಿದ 15ನೇ ಸ್ಮರನಮನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಇಂದಿನ ಯುವಜನತೆ ಪಾಶ್ಚಾತ್ಯ ಸಂಗೀತ ಮತ್ತು ಅಂತರ್ಜಾಲದ ಲೋಕದಲ್ಲಿ ಮುಳುಗಿ ಹೋಗಿದ್ದು, ಅವರಿಗೆ ಇಂತಹ ಸದಭಿರುಚಿಯ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳುವಂತೆ ಪ್ರೇರೇಪಿಸುವ ಅವಶ್ಯಕತೆ ಇದೆ ಎಂದು ಪ್ರತಿಪಾದಿಸಿದರು.

ಮುಖ್ಯ ಅತಿಥಿಗಳಾಗಿ ಪಾಲ್ಗೊಂಡ ಮರಾಠಿ ವಾಙ್ಮಯ ಪ್ರೇಮಿ ಮಂಡಳದ ಗೌರವ ಕಾರ್ಯದರ್ಶಿಗಳು ಹಾಗೂ ಖ್ಯಾತ ವೈದಿಕ ವಿದ್ವಾಂಸರಾದ ರತ್ನಾಕರಭಟ ಜೋಶಿ ಮಾತನಾಡಿ, ಮರಾಠಿ ಮಂಡಳದಲ್ಲಿ ಪಂಡಿತ ಭೀಮಸೇನ ಜೋಶಿಯವರು ಸೇರಿದಂತೆ ಅನೇಕ ರಾಷ್ಟ್ರೀಯ ಮಟ್ಟದ ಸಂಗೀತ ಕಲಾವಿದರು, ಸಂಗೀತ ಕಚೇರಿಗಳನ್ನು ನೀಡಿದ್ದು, ಇಲ್ಲಿ ಪಂಡಿತಜಿಯವರ ಸ್ವರನಮನ ಕಾರ್ಯಕ್ರಮ ಜರುಗುತ್ತಿರುವುದು ಸಂತೋಷವನ್ನುಂಟುಮಾಡಿದೆ ಎಂದು ಹೇಳಿದರು.



ಖ್ಯಾತ ವೈದ್ಯರಾದ ಡಾ. ಉದಯ ಕುಲಕರ್ಣಿ ಸಂಗೀತ ಕಲಾವಿದರಾದ ಗಾಯಿತ್ರಿ ಟೋಣಪಿ ವೇದಿಕೆಯ ಮೇಲೆ ಉಪಸ್ಥಿತರಿದ್ದರು. ಭೀಮಸೇನ ಜೋಶಿ ಪ್ರತಿಷ್ಠಾನದ ಅಧ್ಯಕ್ಷರಾದ ಪಂ. ಅರವಿಂದ ಹುಯಿಲಗೋಳಕರ ಅಧ್ಯಕ್ಷತೆ ವಹಿಸಿದ್ದರು. ಅರುಣ ರಾಜಪುರೋಹಿತ ಸ್ವಾಗತಿಸಿದರು. ಡಾ. ದತ್ತಪ್ರಸನ್ನ ಪಾಟೀಲ ನಿರೂಪಿಸಿ ವಂದಿಸಿದರು. ಸಮಾರಂಭದಲ್ಲಿ ರವೀಂದ್ರ ಜೋಶಿ, ವಾದಿರಾಜ ಜೋಶಿ, ವಾಸುದೇವಾಚಾರ್ಯ ಹೂಲಿ, ಶ್ರೀಕಾಂತ ಹೂಲಿ, ಆರ್.ಎಸ್. ಕುಲಕರ್ಣಿ, ಡಾ. ರಾಜಶೇಖರ ಬಳ್ಳಾರಿ, ಡಾ. ಹಿರೇಗೌಡರ, ಪ್ರಾಣೇಶ ಕುಲಕರ್ಣಿ, ಗೋಡಬೋಲೆ, ಹೆಚ್.ಪಿ. ಸುಬ್ಬಣ್ಣವರ, ಡಾ. ಸುಬ್ಬಣ್ಣವರ, ಕೃಷ್ಣಾಜಿ ನಾಡಿಗೇರ, ಅನಿಲ ಪುರಾಣಿಕ, ಎಸ್.ಎಲ್. ಹುಯಿಲಗೋಳ, ವ್ಹಿ.ಆರ್. ಗುಡಿ, ವಾಣಿಶ್ರೀ ರಾಜಪುರೋಹಿತ, ವೈಶಾಲಿ ಕುಲಕರ್ಣಿ, ಹನುಮಂತ ಮಳಲಿ, ಸುಮನ್ ಪಾಟೀಲ, ಮಹಾಂತೇಶ ಮಾಸ್ತಮರ್ಡಿ ಸೇರಿದಂತೆ ಸಂಗೀತಾಸ್ತಕರು ಪಾಲ್ಗೊಂಡಿದ್ದರು.

> ಸಭೆಯ ನಂತರ ಭೀಮಸೇನ ಜೋಶಿಯವರ ನೇರ ಶಿಷ್ಯರಾದ ಖ್ಯಾತ ಹಿಂದೂಸ್ತಾನಿ ಸಂಗೀತ ಕಲಾವಿದ ಪಂ. ಮಾಧವ ಗುಡಿಯವರ ಸುಪುತ್ರಿ ಗಾಯಿತ್ರಿ ಟೋಣಪಿ (ಗುಡಿ) ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ, ಸಂತವಾಣಿ ಹಾಗೂ ಭಜನ್ ಕಾರ್ಯಕ್ರಮಗಳನ್ನು ನಡೆಸಿಕೊಟ್ಟರು. ವಿಠ್ಠಲ ಕಟ್ಟೆಣ್ಣವರ ಸಂವಾದಿನಿ ಹಾಗೂ ಜಯತೀರ್ಥ ಪಂಚಮುಖಿ ತಬಲಾಸಾಥ ನೀಡಿದರು. ಐಶ್ವರ್ಯ ಹೂಲಿ ತಾನಪುರ ಮತ್ತು ಸಚಿನ್ ಹುಯಿಲಗೋಳಕರ ತಾಳಸಾಥ ನೀಡಿದರು.

# ಜೀವನ ದರ್ಶನ ಕಾರ್ಯಕ್ರಮ ಇಂದು

**■ವಿಜಯಸಾಕ್ಷಿ ಸುದ್ದಿ, ಗದಗ**

ಗದುಗಿನ ವಿವೇಕಾನಂದ ನಗರದ ಕಾಶೀ ವಿಶ್ವನಾಥ ದೇವಸ್ಥಾನದ ಶ್ರೀ ಸ್ವಾಮಿ ವಿವೇಕಾನಂದ ಸಾಂಸ್ಕೃತಿಕ ಸಮಿತಿಯು 'ಜೀವನ ದರ್ಶನ' ಮಾಲಿಕೆ 56ನೇ ಮಾಸಿಕ ಕಾರ್ಯಕ್ರಮ ಹಾಗೂ ಮಹಾ ಶಿವರಾತ್ರಿ ಮಹೋತ್ಸವದ ಕಾರ್ಯಕ್ರಮವನ್ನು ಫೆ. 15ರಂದು ಸಂಜೆ 6.30 ಗಂಟೆಗೆ ಶ್ರೀ ಸ್ವಾಮಿ ವಿವೇಕಾನಂದ ಸಾಂಸ್ಕೃತಿಕ ಭವನದಲ್ಲಿ ಏರ್ಪಡಿಸಿದೆ. ಸಾನ್ನಿಧ್ಯವನ್ನು ಲಕ್ಕುಂಡಿಯ ಅಲ್ಲಮಪ್ರಭು ದೇವರಮಠದ ಪೂಜ್ಯ ಸಿದ್ಧಲಿಂಗ ಮಹಾಸ್ವಾಮಿಗಳು ವಹಿಸುವರು. ಅಧ್ಯಕ್ಷತೆಯನ್ನು ಸ್ವಾಮಿ ವಿವೇಕಾನಂದ ಸಾಂಸ್ಕೃತಿಕ ಸಮಿತಿಯ ಅಧ್ಯಕ್ಷ ಎ.ಟಿ. ನರೇಗಲ್ಲ ವಹಿಸುವರು. ಸಮಿತಿಯ ಗೌರವಾಧ್ಯಕ್ಷ ಜಿ.ಜಿ. ಕುಲಕರ್ಣಿ, ಉಪಾಧ್ಯಕ್ಷ ಆರ್.ಆರ್. ಕಾಶಪ್ಪನವರ ಉಪಸ್ಥಿತರಿರುವರು.

ಇದೇ ಸಂದರ್ಭದಲ್ಲಿ ಮಕ್ಕಳಿಂದ ಹಾಗೂ ಮಹಿಳೆಯರಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ. ಫೆ. 17ರಂದು ಸಂಜೆ 6.30 ಗಂಟೆಗೆ ಕಾಶೀ ವಿಶ್ವನಾಥನ ಪಾಲಕಿ ಸೇವೆ ಜರುಗಲಿದೆ. ಸರ್ವ ಭಕ್ತಾಧಿಗಳು ಸಕಾಲಕ್ಕೆ ಆಗಮಿಸಿ ಕಾರ್ಯಕ್ರಮ ಯಶಸ್ವಿಗೊಳಿಸಲು ಕಾರ್ಯದರ್ಶಿ ಕೆ.ಪಿ. ಗುಳಗೌಡರ ವಿನಂತಿಸಿದ್ದಾರೆ.

# ಕಾಯಕ ಶರಣರ ಜಯಂತಿ, ಉಪನ್ಯಾಸ ಇಂದು

**■ವಿಜಯಸಾಕ್ಷಿ ಸುದ್ದಿ, ಗದಗ**

ಇಲ್ಲಿನ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ಫೆ. 15ರ ಬೆಳಿಗ್ಗೆ 10ಕ್ಕೆ ನಡೆಯಲಿರುವ ಬಸವದಳದ 1685ನೇ ಶರಣ ಸಂಗಮದಲ್ಲಿ ಕಾಯಕ ಶರಣರ ಜಯಂತಿ ಹಾಗೂ ಮಹಾಶಿವರಾತ್ರಿ ಕುರಿತು ಉಪನ್ಯಾಸ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಅಧ್ಯಕ್ಷತೆಯನ್ನು ಬಸವದಳದ ಕಾರ್ಯಾಧ್ಯಕ್ಷ, ಶರಣ ಎಂ.ಬಿ. ಲಿಂಗಧಾಳ ವಹಿಸುವರು. ನಿವೃತ್ತ ಪ್ರಾಚಾರ್ಯ, ಶರಣ ಎನ್.ಎಂ. ಪವಾಡಿಗೌಡ್ರ ಉಪನ್ಯಾಸ ಮಾಡುವರು. ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಸಂಘಟಕರ ಪರವಾಗಿ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.

**ಶ್ರೀ ಜಗದ್ಗುರು ರೇವಣಸಿದ್ದೇಶ್ವರ ಮೂರ್ತಿ ಪ್ರತಿಷ್ಠಾಪನೆ ಕಾರ್ಯಕ್ರಮದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು**

# ನೀತಿ ಅರಿತು ಬಾಳಿದರೆ ನೆಮ್ಮದಿಯ ಫಲ



ನೇತೃತ್ವ ವಹಿಸಿದ್ದ ಭೂಸಣಗಿ ಶ್ರೀ ಜಗದ್ಗುರು ರೇವಣಸಿದ್ದೇಶ್ವರರ ಆರಾಧಕರಾದ ಶರಣ ಪ್ರಕಾಶ ಮುತ್ಯಾ ಮಾತನಾಡಿ, ಗುರು ಕಾರುಣ್ಯವಿಲ್ಲದೇ ಜೀವನ ಉಜ್ವಲಗೊಳ್ಳದು. ಗುರಿ ಮತ್ತು ಗುರು ಎಲ್ಲರಿಗೂ ಅವಶ್ಯಕ. ಅಜ್ಞಾನ ಕಳೆದು ಸುಜ್ಞಾನ ನೀಡುವಾತನೇ ನಿಜವಾದ ಗುರು. ಶ್ರೀ ಜಗದ್ಗುರು ರೇವಣಸಿದ್ದೇಶ್ವರರ ಲೀಲೆ, ಪವಾಡಗಳು ಹಲವಾರು. ಶ್ರೀ ರಂಭಾಪುರಿ ಜಗದ್ಗುರುಗಳ ಆಶೀರ್ವಾದ ನಮ್ಮೆಲ್ಲರ ಮೇಲಿರಲಿ ಎಂದರು.

**■ವಿಜಯಸಾಕ್ಷಿ ಸುದ್ದಿ, ಕಮಲಾಪುರ**

ಸಮೃದ್ಧಿ ಮತ್ತು ಶಾಂತಿಗೆ ದೈವೀ ಗುಣಗಳ ಅವಶ್ಯಕತೆಯಿದೆ. ಮೌಲ್ಯಗಳ ಉಳಿವು-ಅಳಿವು ಮಾನವನ ಆಚರಣೆಯಲ್ಲಿವೆ. ಧರ್ಮದ ನೀತಿ ಸಂಹಿತೆ ಅರಿತು ಬಾಳಿದರೆ ನೆಮ್ಮದಿಯ ಫಲ ಪ್ರಾಪ್ತವಾಗುವುದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶನಿವಾರ ತಾಲೂಕಿನ ಭೂಸಣಗಿ ಗ್ರಾಮದಲ್ಲಿ ಶ್ರೀ ಜಗದ್ಗುರು ರೇವಣಸಿದ್ದೇಶ್ವರ ಮೂರ್ತಿ ಪ್ರತಿಷ್ಠಾಪನೆ, ಕಳಸಾರೋಹಣದ ಅಂಗವಾಗಿ ಜರುಗಿದ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಗಳಿಕೆಯೊಂದೇ ಜೀವನದ ಗುರಿಯಲ್ಲ. ಬಾಳಿನಲ್ಲಿ ಒಂದಿಷ್ಟಾದರೂ ಶಿವಜ್ಞಾನ ಮತ್ತು ಗುರು ಕಾರುಣ್ಯ ಗಳಿಸಿ ಬಾಳುವುದು ಜೀವನದ ಉತ್ಕರ್ಷತೆಗೆ ಸಹಕಾರಿ. ಅಸಿ-ಮಸಿ ಕೃಷಿ ಜಗತ್ತಿನ ಜೀವ ರಾಶಿಯನ್ನು ಸಲಹುವ ರಕ್ಷಾ ಕವಚಗಳು. ದೇಹವಿದು ದೇವನಿರುವ ದೇಗುಲ. ಸತ್ಯ ಮತ್ತು ಶಾಂತಿಗಳಂಥ ದೈವೀ ಗುಣಗಳ ಹಣ್ಣು-ಹಂಪಲಗಳನ್ನು ಬೆಳೆಯಬೇಕು. ಅಸುರಿ ಗುಣಗಳ ಕಸ ಕಡ್ಡಿ ಕಿತ್ತು ಹಾಕಿ ಮುಳ್ಳು ಕಲ್ಲುಗಳನ್ನು ಸ್ವಚ್ಛಗೊಳಿಸಬೇಕು. ಶ್ರೀ ಜಗದ್ಗುರು ರೇವಣಸಿದ್ದೇಶ್ವರರು ಧಾರ್ಮಿಕ ಮತ್ತು ಸಾಮಾಜಿಕ ಸತ್ಕ್ರಾಂತಿಗೆ ಕೊಟ್ಟ ಕೊಡುಗೆ ಅಮೂಲ್ಯವಾದುದೆಂದರು.

ಸ್ಟೇಷನ್ ಬಬಲಾದ ಶಿವಮೂರ್ತಿ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಧ್ಯೇಯ ಸಾಧನೆಗಾಗಿ ಆತ್ಮವಿಶ್ವಾಸ ಮತ್ತು ನಿರಂತರ ಪ್ರಯತ್ನ ಅವಶ್ಯಕ. ಮಾತು, ಮನ ಮತ್ತು ಕೃತಿ ಒಂದಾಗಿ ಬಾಳಿದರೆ ಜೀವನ ಸಾರ್ಥಕಗೊಳ್ಳುವುದೆಂದರು.

ಮುತ್ಯಾನ ಬಬಲಾದ ಗುರುಪಾದಲಿಂಗ ಸ್ವಾಮಿಗಳು ಸಮಾರಂಭದ ಅಧ್ಯಕ್ಷತೆ ವಹಿಸಿದ್ದರು. ಕಲಬುರ್ಗಿ ಗ್ರಾಮೀಣ ಮತಕ್ಷೇತ್ರದ ಶಾಸಕ ಬಸವರಾಜ ಮತ್ತಿಮಡು ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿ, ಶ್ರೀ ಜಗದ್ಗುರು ರೇವಣಸಿದ್ಧೇಶ್ವರರು ಮಾಡಿದ ಜನಪರ ಕಾರ್ಯಗಳನ್ನು ಮರೆಯುವಂತಿಲ್ಲ. ಶ್ರೀ ರಂಭಾಪುರಿ ಜಗದ್ಗುರುಗಳ ಸಮಾರಂಭಕ್ಕೆ ಆಗಮಿಸಿ ನಮ್ಮೆಲ್ಲರನ್ನು ಆಶೀರ್ವದಿಸಿರುವುದು ಈ ಭಾಗದ ಜನತೆಯ ಪುಣ್ಯ ಎಂದರು.

ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದ ಮಾಜಿ ಸಚಿವ ಎಸ್.ಕೆ. ಕಾಂತಾ, ಮಾಜಿ ವಿ.ಪ. ಸದಸ್ಯ ಅಮರನಾಥ ಪಾಟೀಲ, ಕಲಬುರ್ಗಿಯ ಶಿವಪ್ರಭು ಪಾಟೀಲ, ನೀಲಕಂಠರಾವ್ ಎಸ್.ಮೂಲಗೆ, ಸಿ.ಎ. ವೀರಣ್ಣ ಮಾಂತಗೋಳ, ಶಿವಶರಣಪ್ಪ ಸೀರಿ, ಶಿವಕುಮಾರ ಪಸಾರ, ಬಸವರಾಜ ಕಿಣಗಿ, ಗುಂಡೂರಾವ ಕಡಣಿ, ಸಿದ್ದನಗೌಡ ಕೆ.ಮಾಲಿಪಾಟೀಲ ಇವರೆಲ್ಲರಿಗೂ ಶ್ರೀ ರಂಭಾಪುರಿ ಜಗದ್ಗುರುಗಳು ಗುರು ರಕ್ಷೆಯಿತ್ತು ಶುಭ ಹಾರೈಸಿದರು.

ಮಹಾಗಾಂವನ ಅಮೃತಪ್ಪ ಮಲ್ಕಪ್ಪಗೋಳ, ಬೀದರನ ಸಿದ್ರಾಮಪ್ಪ ಚ.ಬೆಳಕೇರಿ, ಮುತ್ತಂಗಿಯ ಷಣ್ಮುಖಯ್ಯಸ್ವಾಮಿ ಮಠಪತಿ, ಜಹೀರಾಬಾದನ ದೂಳಪ್ಪ ಬೆಳಕೇರಿ, ನಿರ್ಣಾದ ಶ್ರೀನಿವಾಸ ರಾಮರೆಡ್ಡಿ, ಕುಮಸಿಯ ಬಸವರಾಜ ಈರದಿ, ಅಂಬಲಗಾದ ದಯಾನಂದ ಮರಗುತ್ತಿ ಇವರಿಗೆ 'ಶ್ರೀ ಜಗದ್ಗುರು ರೇವಣಸಿದ್ಧೇಶ್ವರ ಭಕ್ತಿ ಭೂಷಣ' ಪ್ರಶಸ್ತಿ ಪ್ರದಾನ ಮಾಡಲಾಯಿತು. ಭೂಸಣಗಿ ಕಳ್ಳಿಮಠದ ವಿರೂಪಾಕ್ಷ ದೇವರು, ಶ್ರೀನಿವಾಸ ಸರಡಗಿಯ ಗಿರೆಪ್ಪ ಮುತ್ಯಾ ಪಾಲ್ಗೊಂಡಿದ್ದರು. ಮಲ್ಲಿಕಾರ್ಜುನ ಸಿರಸಗಿ ನಿರೂಪಿಸಿದರು. ಬಂದ ಎಲ್ಲ ಭಕ್ತರಿಗೂ ಪರಮೇಶ್ವರ ಮಲ್ಲೇಶಪ್ಪ ಮಾಲಿ ಬಿರಾದಾರ ಕೊರವಿ ಇವರಿಂದ ಅನ್ನ ದಾಸೋಹ ಜರುಗಿತು.

**ಅರುಣೋದಯ ವಿಶೇಷ ಅಗತ್ಯವುಳ್ಳ ಮಕ್ಕಳ ಶಾಲೆಯಲ್ಲಿ ವಾರ್ಷಿಕೋತ್ಸವ**

# ವಿಶೇಷ ಅಗತ್ಯವುಳ್ಳ ಮಕ್ಕಳನ್ನು ಪ್ರೋತ್ಸಾಹಿಸಿ



ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಅರುಣೋದಯ ವಿಶೇಷ ಅಗತ್ಯವುಳ್ಳ ಮಕ್ಕಳ ಶಾಲೆಯ ಉಪಾಧ್ಯಕ್ಷ ಲುಕ್ಕಣಸಾ ರಾಜೋಳಿ ಮಾತನಾಡಿ, ಗದಗ ಪರಿಸರದಲ್ಲಿ ಪ್ರತಿಷ್ಠಿತ ಶಾಲೆಯಾಗಿ ಹೊರಹೊಮ್ಮಿದ್ದು, ವಿಶೇಷ ಮತ್ತು ವಿಶಿಷ್ಟ ರೀತಿಯ ಕಾರ್ಯ ಮಾಡುತ್ತಿದೆ. ಈ ಶಾಲೆಗೆ ಹಲವಾರು ಸಂಘ-ಸಂಸ್ಥೆಗಳು, ಗಣ್ಯಮಾನ್ಯರು ಸಹಾಯ-ಸಹಕಾರ ನೀಡುತ್ತಿರುವದು ಅಭಿನಂದನೀಯ. ಈ ಸಹಕಾರ ಮುನ್ನಡೆಯಲಿ ಎಂದರು.

**■ವಿಜಯಸಾಕ್ಷಿ ಸುದ್ದಿ, ಗದಗ**

ವಿಶೇಷ ಅಗತ್ಯವುಳ್ಳ ಮಕ್ಕಳ ಬಗ್ಗೆ ಅನುಕಂಪ ಬೇಡ. ಅವರಿಗೂ ಎಲ್ಲ ರೀತಿಯ ಅವಕಾಶ ನೀಡಿದರೆ ಅವರೂ ಸಹ ಸಾಮಾನ್ಯ ಮಕ್ಕಳಂತೆ ಪ್ರತಿಭಾನ್ವಿತರಾಗಿ ಹೊರಹೊಮ್ಮುವರು ಎಂದು ಜನ ಚೇತನ ಶಿಕ್ಷಣ ಸಮಿತಿಯ ವ್ಯವಸ್ಥಾಪಕ ನಿರ್ದೇಶಕಿ ಡಾ. ವೇದಾ ವಿಕ್ರಮ ಬಿದರೂರ ಹೇಳಿದರು.

ಅವರು ಶನಿವಾರ ನಗರದ ಅರುಣೋದಯ ವಿಶೇಷ ಅಗತ್ಯವುಳ್ಳ ಮಕ್ಕಳ ಶಾಲೆಯ ವಾರ್ಷಿಕೋತ್ಸವ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡಿದರು.

ವಿಶೇಷ ಅಗತ್ಯವುಳ್ಳ ಮಕ್ಕಳ ಬಗ್ಗೆ ಪಾಲಕ-ಪೋಷಕರು ಹೆಚ್ಚಿನ ಹಾಗೂ ವಿಶೇಷ ಕಾಳಜಿ ವಹಿಸುವದು ಅವಶ್ಯ. ಇಂತಹ ಮಕ್ಕಳನ್ನು ಪಾಲಕರಿಗಿಂತ ಅರುಣೋದಯ ಶಾಲೆಯಲ್ಲಿ ಶಿಕ್ಷಕ ಶಿಕ್ಷಕಿಯರು ಬಹಳಷ್ಟು ಪ್ರೀತಿಯಿಂದ ಸಂಬಾಳಿಸುವ ಮೂಲಕ ಅವರನ್ನು ಶಿಸ್ತಿಗೆ ಒಳಪಡಿಸುವಲ್ಲಿ, ನಿಯಂತ್ರಿಸುವಲ್ಲಿ ನಿಪುಣರಾಗಿದ್ದಾರೆ. ಒಂದರ್ಥದಲ್ಲಿ ಇವರುಗಳೇ ರಿಯಲ್ ಹೀರೋ ಎಂದು ಬಣ್ಣಿಸಿದರು.

ವಿಶೇಷ ಅಗತ್ಯವುಳ್ಳ ಮಕ್ಕಳಿಗೆ ಅವಶ್ಯಕವಿರುವ ಎಲ್ಲ ರೀತಿಯ ಸಹಾಯಕ ಸೌಲಭ್ಯ, ಸಲಕರಣೆ, ಆರೋಗ್ಯ ತಪಾಸಣೆ, ಫಿಜಿಯೋಥೆರಪಿ ಸೇರಿದಂತೆ ಮಕ್ಕಳ ಸರ್ವತೋಮುಖ ಬೆಳವಣಿಗೆಗೆ ಅವಶ್ಯವಿರುವ ಕ್ರಮಗಳನ್ನು ಈ ಶಾಲೆಯಲ್ಲಿ ಯಶಸ್ವಿಯಾಗಿ ಅನುಷ್ಠಾನಗೊಳಿಸಿರುವದು ಅಭಿನಂದನೀಯ ಎಂದರು.

ಇನ್ನೋರ್ವ ಮುಖ್ಯ ಅತಿಥಿ ಕಂಚನ್‌ದೇವಿ ಓಸ್ವಾಲ್ ಮಾತನಾಡಿ, ವಿಶೇಷ ಅಗತ್ಯವುಳ್ಳ ಮಕ್ಕಳ ಸೇವೆ ಎಂದರೆ ಅದರು ದೇವರ ಸೇವೆಯೇ ಸರಿ. ಇಂತಹ ಮಕ್ಕಳು ಭವಿಷ್ಯದಲ್ಲಿ ಉತ್ತಮ ವ್ಯಕ್ತಿತ್ವ ಹೊಂದುವವರಾಗಿದ್ದಾರೆ ಎಂದರು.


ವೇದಿಕೆ ಮೇಲೆ ಉಪಸ್ಥಿತರಿದ್ದ ಹುಬ್ಬಳ್ಳಿಯ ಸೇವಾ ಭಾರತಿ ಟ್ರಸ್ಟ್‌ನ ವಿಶ್ವಸ್ಥರಾದ ಶ್ರೀಕೃಷ್ಣ ಕುಲಕರ್ಣಿ ಅವರು ಮಾತನಾಡಿ, ಸಮಾಜಮುಖಿ, ಜನಮುಖಿ ಕಾರ್ಯ ಮಾಡಲೆಂದೇ ಸ್ಥಾಪನೆಗೊಂಡಿರುವ ಸೇವಾ ಭಾರತಿ ಸಂಸ್ಥೆಯು ಬೇರೆ ಬೇರೆ ರೀತಿಯಲ್ಲಿ ಮಾನವೀಯ ಕಾರ್ಯಗಳಲ್ಲಿ ತನ್ನನ್ನು ಸಮರ್ಪಿಸಿಕೊಂಡಿದೆ. ಹಿರಿಯ ಸಾಧಕರು, ಅನುಭಾವಿಗಳು ಈ ಸಂಸ್ಥೆಯ ಮೂಲಕ ವಿಧಾಯಕ ಕಾರ್ಯಗಳಲ್ಲಿ ತಮ್ಮನ್ನು ಹಾಗೂ ಈ ಕ್ಷೇತ್ರದಲ್ಲಿ ಆಸಕ್ತಿಯುಳ್ಳವರನ್ನು ಸೇರಿಸಿಕೊಂಡು ಒಳ್ಳೆಯ ಕೆಲಸ ಮಾಡುತ್ತಿದೆ ಎಂದರು.

ವಿಶೇಷ ಅಗತ್ಯವುಳ್ಳ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು. ವಿದ್ಯಾರ್ಥಿಗಳು ಪ್ರಾರ್ಥಿಸಿದರು. ಡಾ. ಉಮೇಶ ಹಾದಿ ಸ್ವಾಗತಿಸಿದರು, ಕಾರ್ಯದರ್ಶಿ ಜಯರಾಜ ಮುಳಗುಂದ ಪ್ರಾಸ್ತಾವಿಕವಾಗಿ ಮಾತನಾಡಿದರು.

ಸಮಾರಂಭದಲ್ಲಿ ಜಿತೇಂದ್ರ ಶಹಾ, ಬಸವರಾಜ ನಾಗಲಾಪೂರ, ಬಸವರಾಜ ಪಟ್ಟಣಶೆಟ್ಟಿ, ಮಂಜುನಾಥ ಚನ್ನಪ್ಪನವರ, ಮಲ್ಲಿಕಾರ್ಜುನ ಬೆಲ್ಲದ, ಮಲ್ಲಿಕಾರ್ಜುನ ನಾಗಲಾಪೂರ ಸೇರಿದಂತೆ ಪಾಲಕರು, ಶಿಕ್ಷಕ ಬಳಗ, ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ಶಿವರಾತ್ರಿ ವಿಶೇಷ ಕಾರ್ಯಕ್ರಮ

**■ವಿಜಯಸಾಕ್ಷಿ ಸುದ್ದಿ, ಗದಗ**



ಗದಗ ನಗರದ ಚವಡಿಕೂಟ ಹತ್ತಿರ ಇರುವ ಶ್ರೀ ರಾಮೇಶ್ವರ ದೇವಸ್ಥಾನದಲ್ಲಿ ಮಹಾ ಶಿವರಾತ್ರಿ ನಿಮಿತ್ತ ಫೆ. 15ರಂದು ವಿಶೇಷ ಕಾರ್ಯಕ್ರಮಗಳು ನಡೆಯಲಿವೆ.

ಬೆಳಿಗ್ಗೆ 9 ಗಂಟೆಗೆ ಮಹಿಳೆಯರಿಂದ ರುದ್ರ ಪಠಣ, ರುದ್ರಾಭಿಷೇಕ ಬಿಲ್ವಾರ್ಚನೆ, ಮುತ್ತೈದೆಯರಿಗೆ ಉಡಿ ತುಂಬುವ ಕಾರ್ಯಕ್ರಮ, ನಂತರ ಮಹಾ ಮಂಗಳಾರತಿ, ಪ್ರಸಾದ ವಿತರಣೆ ನಡೆಯಲಿದೆ. ಎಲ್ಲಾ ಸದ್ಭಕ್ತರು ಆಗಮಿಸಿ ದೇವರ ದರ್ಶನ ಪಡೆದು ಕೃತಾರ್ಥರಾಗಬೇಕಾಗಿ ದೇವಸ್ಥಾನದ ಪ್ರಕಟಣೆ ವಿನಂತಿಸಿದೆ.

# ಶ್ರಮದಿಂದ ಓದಿದರೆ ಉತ್ತಮ ಫಲಿತಾಂಶ



**■ವಿಜಯಸಾಕ್ಷಿ ಸುದ್ದಿ, ಗದಗ**

ಇಲ್ಲಿನ ಕೆವಿಎಸ್‌ಆರ್ ಪ್ರೌಢಶಾಲೆಯಲ್ಲಿ ಶಾಲಾ ವಾರ್ಷಿಕೋತ್ಸವ ಮತ್ತು ಮಹಾಸರಸ್ವತಿ ಪೂಜಾ ಸಮಾರಂಭ ಜರುಗಿತು.

ಸಂಸ್ಥೆಯ ಚೇರಮನ್, ಭಾರತ ಸರಕಾರದ ಆಹಾರ ನಿಗಮದ ಸದಸ್ಯರಾದ ರವೀಂದ್ರನಾಥ ದಂಡಿನ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ, ಸಾಧಕರನ್ನು ಸನ್ಮಾನಿಸಿ ಮಾತನಾಡುತ್ತ, ಮಕ್ಕಳು ನಿರಂತರ ಶ್ರಮವಹಿಸಿ ಓದಿದರೆ ಉತ್ತಮ ಫಲಿತಾಂಶ ಕಾಣಬಹುದು ಎಂದರು.

ಇದೇ ಸಂದರ್ಭದಲ್ಲಿ ಮಕ್ಕಳಿಂದ ಪಾಲಕರ ಪಾದಪೂಜೆ, ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ಪ್ರಾಚಾರ್ಯ ಭಂಡಾರಿ ಗುರುಗಳು, ಅತಿಥಿಗಳಾದ ನಿವೃತ್ತ ಪ್ರಾಚಾರ್ಯ ಯು.ಎಸ್. ಹಿರೇಮಠ ಮಾತನಾಡಿದರು. ಮುಖ್ಯ ಶಿಕ್ಷಕಿ ಪಿ.ಟಿ. ಬಿಸನಳ್ಳಿ ಅಭಿನಂದನಾ ನುಡಿಗಳನ್ನಾಡಿದರು. ಈ ಸಂದರ್ಭದಲ್ಲಿ ಶಿಕ್ಷಕ ಎಂ.ಕೆ. ಬೇವಿನಕಟ್ಟಿ, ಎಸ್.ಎಸ್. ಮುಧೋಳ, ದೀಪಾ ಎಂ, ಎಸ್.ಕೆ. ಬಸಾಪುರ, ಬಿ.ಎನ್. ಕಮ್ಮಾರ ಉಪಸ್ಥಿತರಿದ್ದರು. ಅನ್ನಪೂರ್ಣ ಕಮ್ಮಾರ ಪ್ರಾರ್ಥಿಸಿದರು. ವಿದ್ಯಾ ಚೇಗರಡ್ಡಿ ಸ್ವಾಗತಿಸಿದರು. ಲಕ್ಷ್ಮೀ ಬಾರ್ಕಿ ನಿರ್ವಹಿಸಿದರು.

# ಕರ್ನಾಟಕದಲ್ಲಿ ಕನ್ನಡವೇ ಸಾರ್ವಭೌಮ ಭಾಷೆಯಾಗಿರಲಿ - ಸರ್ವಾಧ್ಯಕ್ಷೆ ಲಲಿತಕ್ಕ ಅಭಿಮತ

▶▶ಮೊದಲನೇ ಪುಟದಿಂದ

ಎರಡು ಸಾವಿರ ವರ್ಷಗಳ ಇತಿಹಾಸ ಹೊಂದಿರುವ ಕನ್ನಡ ನಾಡು-ನುಡಿಯನ್ನು ಮತ್ತಷ್ಟು ಶ್ರೀಮಂತಗೊಳಿಸಲು ಶಾಲಾ ಹಂತದಲ್ಲಿಯೇ ಮಕ್ಕಳಲ್ಲಿ ಕನ್ನಡದ ಬಗ್ಗೆ ಗೌರವಾಭಿಮಾನ ಬೆಳೆಸುವುದು ಅಗತ್ಯವಾಗಿದೆ. ಈ ನಿಟ್ಟಿನಲ್ಲಿ ಪಾಲಕರು, ಶಿಕ್ಷಕರು, ಕಸಾಪ ಹಾಗೂ ಕನ್ನಡ ಸಂಘಟನೆಗಳ ಜವಾಬ್ದಾರಿ ಹೆಚ್ಚಾಗಿದೆ ಎಂದರು.

"ಎಲ್ಲಾದರೂ ಇರು, ಎಂತಾದರೂ ಇರು, ಎಂದೆಂದಿಗೂ ನೀ ಕನ್ನಡಿಗವಾಗಿರು" ಎಂಬ ಕುವೆಂಪು ಅವರ ಕವಿವಾಣಿಯಂತೆ ಪ್ರತಿಯೊಬ್ಬ ಕನ್ನಡಿಗನ ಮನದಾಳದಲ್ಲಿ ಕನ್ನಡ ಮಿಡಿಯಬೇಕು. ಕನ್ನಡ ಪ್ರೀತಿಸುವುದು, ಬೆಳೆಸುವುದು ಮತ್ತು ಗೌರವಿಸುವುದೇ ನಿಜವಾದ ನಾಡಭಕ್ತಿ ಎಂದು ಅಭಿಪ್ರಾಯಪಟ್ಟರು.

**ಕನ್ನಡ ಮಾಧ್ಯಮ ಶಾಲೆಗಳಿಗೆ ಅಗತ್ಯ ಸೌಲಭ್ಯ ಒದಗಿಸಿ**

ಅರ್ಹ ಶಿಕ್ಷಕರನ್ನು ನೇಮಿಸುವ ಮೂಲಕ ಶೈಕ್ಷಣಿಕ ಪ್ರಗತಿಗೆ ಆದ್ಯತೆ ನೀಡಬೇಕು. ಪ್ರಾಥಮಿಕ ಶಿಕ್ಷಣ ಕನ್ನಡ ಮಾಧ್ಯಮದಲ್ಲೇ ಇರಬೇಕು. ಸಾಹಿತ್ಯ ಭವನ, ರಂಗಮಂದಿರ, ಕ್ರೀಡಾಂಗಣ, ಪ್ರವಾಸಿ ತಾಣಗಳ ಅಭಿವೃದ್ಧಿ, ನೀರಾವರಿ ಯೋಜನೆಗಳ ಜೊತೆಗೆ ಹಳ್ಳಿಯ ಸಂಸ್ಕೃತಿ ಉಳಿವಿಗಾಗಿ ಭಜನಾ ಮಂಡಳಿ ಹಾಗೂ ಕಲಾತಂಡಗಳಿಗೆ ಸರ್ಕಾರ ಧನಸಹಾಯ ನೀಡಿ ಪ್ರೋತ್ಸಾಹಿಸಬೇಕು ಎಂದು ಲಲಿತಕ್ಕ ಕೆರಿಮನಿ ಒತ್ತಾಯಿಸಿದರು.

ಮಕ್ಕಳಲ್ಲಿ ಕನ್ನಡ ಪುಸ್ತಕ ಓದುವ ಹವ್ಯಾಸ ಬೆಳೆಸಲು ಶಾಲೆಗಳಲ್ಲಿ ಕಡ್ಡಾಯವಾಗಿ ಗ್ರಂಥಾಲಯಗಳನ್ನು ತೆರೆಯಬೇಕು. ಉತ್ತಮ ಪುಸ್ತಕಗಳ ಓದು ಮಕ್ಕಳ ಜ್ಞಾನವಿಕಾಸಕ್ಕೆ ಕಾರಣವಾಗುತ್ತದೆ. ಆಡಳಿತ, ಶಿಕ್ಷಣ ಸೇರಿದಂತೆ ಎಲ್ಲ ಕ್ಷೇತ್ರಗಳಲ್ಲಿ ಕನ್ನಡ ಬಳಕೆ ಹೆಚ್ಚಾಗಬೇಕು. ಭಾಷೆಯನ್ನು ಉಳಿಸುವುದು ಎಂದರೆ ನಮ್ಮ ಗುರುತು, ಆತ್ಮಗೌರವ ಮತ್ತು ಭವಿಷ್ಯವನ್ನು ಉಳಿಸುವುದಾಗಿದೆ ಎಂದರು.

ಐತಿಹಾಸಿಕ ಹಿನ್ನೆಲೆಯ ಯಳವತ್ತಿ ಗ್ರಾಮದಲ್ಲಿ ನಡೆದ ಸಮ್ಮೇಳನಕ್ಕೆ ಮಹಿಳೆಗೆ ಸರ್ವಾಧ್ಯಕ್ಷ ಸ್ಥಾನ ನೀಡಿರುವುದು ಶ್ಲಾಘನೀಯ ಕಾರ್ಯ. ಈ ಗೌರವ ನೀಡಿದ ಯಳವತ್ತಿ ಮಹಾಜನತೆ ಹಾಗೂ ಕಸಾಪ ಘಟಕಕ್ಕೆ ಧನ್ಯವಾದಗಳನ್ನು ಸಲ್ಲಿಸಿದರು.

ಲಕ್ಷ್ಮೇಶ್ವರ: ತಾಲೂಕಿನ ಯಳವತ್ತಿಯಲ್ಲಿ ನಡೆದ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ಚಿತ್ರಕಲಾ ಶಿಕ್ಷಕ ಹಾಗೂ ಕಲಾವಿದ ಪ್ರವೀಣ ಗಾಯಕರ ಅವರು ವಿಶಿಷ್ಟವಾಗಿ ಗಮನಸೆಳೆದರು. ಸಮ್ಮೇಳನದಲ್ಲಿ ಭಾಗವಹಿಸಿದ ಮಕ್ಕಳು ಹಾಗೂ ಸಾಹಿತ್ಯಾಭಿಮಾನಿಗಳ ಕೆನ್ನೆಯ ಮೇಲೆ ತಾಯಿ ಭುವನೇಶ್ವರಿ, ಕನ್ನಡ ಸಾಹಿತಿಗಳ ಚಿತ್ರಗಳು, ರೈತರ ಪ್ರತಿರೂಪಗಳು ಹಾಗೂ ಕನ್ನಡ ಬಾವುಟದ ಟ್ಯಾಟುಗಳನ್ನು ಬಿಡಿಸಿ ಕನ್ನಡಾಭಿಮಾನವನ್ನು ಮೆರೆದರು.



# ಸರಕಾರಿ ಉದ್ಯೋಗದಲ್ಲಿ ಕನ್ನಡಕ್ಕೆ ಪ್ರಥಮಾದ್ಯತೆ ನೀಡಿ

▶▶ಮೊದಲನೇ ಪುಟದಿಂದ

ಜೊತೆಗೆ ಮಾತೃಭಾಷೆ ಕನ್ನಡದ ಅಭಿಮಾನ ಬೆಳೆಸಬೇಕು. ರಾಜ್ಯಕ್ಕೆ ಕನ್ನಡ, ದೇಶಕ್ಕೆ ಹಿಂದಿ ಹಾಗೂ ಅಂತಾರಾಷ್ಟ್ರೀಯ ಮಟ್ಟಕ್ಕೆ ಇಂಗ್ಲೀಷ್ ಅವಶ್ಯ. ಕನ್ನಡ ಭಾಷೆ ಬಗ್ಗೆ ಅಭಿಮಾನವಿರಲಿ ಆದರೆ ಬೇರೆ ಭಾಷೆಗಳ ಬಗ್ಗೆ ದುರಾಭಿಮಾನ ಬೆಳೆಸಿಕೊಳ್ಳಬೇಡಿ. ಕನ್ನಡ ಶಾಲೆಗಳನ್ನು ಮುಚ್ಚುವದು ಬೇಡ. ಅವುಗಳನ್ನು ಬೆಳೆಸುವ ಕಾರ್ಯವಾಗಲಿ. ಕನ್ನಡ ಭಾಷೆ, ಜಲ, ಜಲದ ವಿಷಯ ಬಂದಾಗ ಕೇವಲ ಹೆಸರಿಗಾಗಿ ಬಡಿದಾಡದೆ ಕನ್ನಡದ ಉಸಿರಿಗಾಗಿ ಬಡಿದಾಡಿ ಎಂದು ಸಲಹೆ ನೀಡಿದರು.

ವಿಧಾನ ಪರಿಷತ್ ವಿರೋಧ ಪಕ್ಷದ ಮುಖ್ಯ ಸಚೇತಕ ಎನ್. ರವಿಕುಮಾರ ಮಾತನಾಡಿ, ಎಲ್ಲಿ ಕನ್ನಡ ಉಳಿಯಬೇಕಾಗಿದೆಯೋ ಅಲ್ಲಿ ಕನ್ನಡ ಉಳಿಯುತ್ತಿಲ್ಲ. ಅಡುಗೆ ಮನೆಯಿಂದ ಆಡಳಿತದವರೆಗೂ ಕನ್ನಡ ಉಳಿಸಿದವರು ಹೆಣ್ಣುಮಕ್ಕಳು. ಕನ್ನಡ ಭಾಷೆ, ನಮ್ಮ ಸಂಸ್ಕೃತಿ ಉಳಿಯಬೇಕಾಗಿದೆ. ಗದಗ ಜಿಲ್ಲೆಯು ಕನ್ನಡ ನಾಡಿಗೆ ನೀಡಿದ ಕೊಡುಗೆಯಲ್ಲಿ ಕುಮಾರವ್ಯಾಸ, ಪಂಪ, ಪಂ.ಭೀಮಸೇನ ಜೋಶಿ, ಪಂ.ಪುಟ್ಟರಾಜ ಕವಿಗವಾಯಿಗಳು ಹೀಗೆ ಜಿಲ್ಲೆಯ ಕೊಡುಗೆ ಕನ್ನಡಕ್ಕೆ ಅಪಾರವಾಗಿದೆ ಎಂದು ಹೇಳಿದರು.

ವಿಧಾನಪರಿಷತ್ ಸದಸ್ಯ ಪ್ರೊ. ಎಸ್.ವಿ. ಸಂಕನೂರ, ಸರ್ವಾಧ್ಯಕ್ಷೆ ಲಲಿತಕ್ಕ ಕೆರಿಮನಿ, ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ವಿವೇಕಾನಂದಗೌಡ ಪಾಟೀಲ ಆಶಯ ನುಡಿ ನುಡಿದರು. ನಿಕಟಪೂರ್ವ ಅಧ್ಯಕ್ಷ ಡಾ. ನೀಲಗಿರಿ ತಳವಾರ, ಟಿ. ಈಶ್ವರ, ಪಕ್ಷಿ ಪ್ರೇಮಿ ಪ್ರಕಾಶ ಗೌಡರ, ಗ್ಯಾರಂಟಿ ಸಮಿತಿ ಅಧ್ಯಕ್ಷ ನಾಗರಾಜ ಮಡಿವಾಳರ ಮಾತನಾಡಿದರು.

ಈ ಸಂದರ್ಭದಲ್ಲಿ ಮಾಜಿ ಶಾಸಕ ರಾಮಕೃಷ್ಣ ದೊಡ್ಡಮನಿ, ಗೀತಾ ಭೀರಣ್ಣವರ, ಎಸ್.ಪಿ. ಬಳಿಗಾರ, ಎಂ.ಎಸ್. ದೊಡ್ಡಗೌಡ್ರ, ರಾಜು ಕುರಡಗಿ, ಪ್ರೊ. ಎಸ್.ಬಿ. ಕರಿಭರಮಗೌಡರ, ಶಿವಪ್ರಕಾಶ ಲಿಂಬಯ್ಯಸ್ವಾಮಿಮಠ, ಬಸವೇಶ ಮಹಾಂತಶೆಟ್ಟರ, ಕೆ.ಎಸ್. ಕೊಡ್ಲಿವಾಡ, ಎಸ್.ಎಫ್. ಶಿಗ್ಲಿ, ಗೀತಾ ಬೀರಣ್ಣವರ, ಅಶೋಕ ಸೊರಟೂರ, ಎಸ್.ಪಿ. ಬಳಿಗಾರ, ಶರಣು ಗೋಡಿ, ಮಂಜುನಾಥ ಮಾಗಡಿ, ಪುಲಿಕೇಶಿ ಉಪನಾಳ, ಡಿ.ಬಿ. ಬಳಿಗಾರ, ಫಕ್ಕೀರೇಶ ರಟ್ಟೀಹಳ್ಳಿ, ಫಕ್ಕೀರಗೌಡ್ರ ಪಾಟೀಲ, ಬಿಇಓ ಎಚ್ ನಾಣಕಿ ನಾಯ್ಕ, ಸಿಡಿಪಿಓ ಮೃತ್ಯುಂಜಯ ಗುಡ್ಡದನ್ವೇರಿ, ಎಸ್.ಎಫ್. ಶಿಗ್ಲಿ, ಲೋಹಿತ ನೆಲವಿಗಿ ಮುಂತಾದವರಿದ್ದರು. ಕಸಾಪ ತಾಲೂಕಾಧ್ಯಕ್ಷ ಈಶ್ವರ ಮೆಡ್ಲೇರಿ ಸ್ವಾಗತಿಸಿದರು. ರತ್ನಾ ಕುಂಬಾರ, ಸೋಮಶೇಖರ ಪಾಟೀಲ, ಆರ್.ಎಸ್. ಗಾಣಗೇರ ನಿರೂಪಿಸಿದರು.



**ಲಕ್ಷ್ಮೇಶ್ವರ:** ತಾಲೂಕಿನ ಯಳವತ್ತಿ ಗ್ರಾಮದಲ್ಲಿ ಶನಿವಾರ ನಡೆದ ಲಕ್ಷ್ಮೇಶ್ವರ ತಾಲೂಕ 2ನೇ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ಸ್ಮರಣೀಯ ಕೃತಿಗಳ ಬಿಡುಗಡೆ ಕಾರ್ಯಕ್ರಮ ಜರುಗಿತು. ಕೆ.ಎಸ್. ಕೊಡ್ಲಿವಾಡ, ನಾಗರಾಜ ಮಜ್ಜಿಗುಡ್ಡ ಹಾಗೂ ಮಂಜುನಾಥ ಚಾಕಲಬ್ಬಿ ಅವರ ಸಂಪಾದಕತ್ವದಲ್ಲಿ ಪ್ರಕಟವಾದ ಸಮ್ಮೇಳನದ ಸ್ಮರಣ ಸಂಚಿಕೆ 'ಮೃದಪುರ ನುಡಿಜಾತ್ರೆ', ಹಿರಿಯ ಸಾಹಿತಿ ಕೆ.ಎಸ್. ಕೊಡ್ಲಿವಾಡ ಅವರ 'ಮಂಗೋಲಿಯಾ ಟು ಮಾಗಡಿ', ಸುರೇಶ ತಂಗೋಡ ಅವರ 'ಅಂಗೈಯಲ್ಲಿ ಅಂಚೆ', ಮೈತ್ರಾದೇವಿ ಹಿರೇಮಠ ಅವರ 'ಆಗಂತುಕದತ್ತ ಮುಖಮಾಡಿ' ಮತ್ತು 'ವಚನಾಮೃತ' ಕೃತಿಗಳನ್ನು ಬಿಡುಗಡೆಗೊಳಿಸಲಾಯಿತು.

ಕಾರ್ಯಕ್ರಮದಲ್ಲಿ ಶಾಸಕ ಡಾ. ಚಂದ್ರು ಲಮಾಣಿ, ಶ್ರೀ ಫಕೀರ ದಿಂಗಾಲೇಶ್ವರ ಜಗದ್ಗುರುಗಳು, ಸಮ್ಮೇಳನಾಧ್ಯಕ್ಷೆ ಲಲಿತಕ್ಕ ಕೆರಿಮನಿ, ಟಿ. ಈಶ್ವರ, ರಾಮಕೃಷ್ಣ ದೊಡ್ಡಮನಿ, ಪ್ರಕಾಶ ಗೌಡರ ಸೇರಿದಂತೆ ಅನೇಕ ಸಾಹಿತಿಗಳು ಹಾಗೂ ಗಣ್ಯರು ಉಪಸ್ಥಿತರಿದ್ದರು.



**ಲಕ್ಷ್ಮೇಶ್ವರ:** ತಾಲೂಕಿನ ಯಳವತ್ತಿಯಲ್ಲಿ ನಡೆದ ಕನ್ನಡ ಸಾಹಿತ್ಯ ಸಮ್ಮೇಳನದ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಲಕ್ಷ್ಮೇಶ್ವರದ ದಿ. ಯೂನಿಕ್ ಶಾಲೆಯ ವಿದ್ಯಾರ್ಥಿನಿ ಚಂದನಾ ಕಳಸಾಪುರ ಅವರು ಭರತನಾಟ್ಯ ಪ್ರದರ್ಶನ ನೀಡಿ ಪ್ರೇಕ್ಷಕರ ಮನಗೆದ್ದರು.




### ಲಿಂಗಾಯತ ಪ್ರಗತಿಶೀಲ ಸಂಘದ ಶಿವಾನುಭವ ಕಾರ್ಯಕ್ರಮದಲ್ಲಿ ಡಾ. ತೋಂಟದ ಸಿದ್ಧರಾಮ ಶ್ರೀಗಳು

# ದಾಸೋಹ, ಸಮಾನತೆ ಅತ್ಯಂತ ಮುಖ್ಯ



ಪ್ರಭುತ್ವ ಹೋಗಿ ಪ್ರಜಾಪ್ರಭುತ್ವ ಬಂದಿದೆ. 900 ವರ್ಷಗಳ ಹಿಂದೆಯೇ ಸಾಮಾಜಿಕ ಕ್ರಾಂತಿಯನ್ನು ಶರಣರು ಮಾಡಿದ್ದಾರೆ. ಇನ್ನೂ ಮೇಲು-ಕೀಳು ತಾರತಮ್ಯ ಮುಂದುವರೆದಿದೆ. ಸಾಮಾಜಿಕ ಅನಿಷ್ಠಗಳಿವೆ. ಇವುಗಳನ್ನು ಹೋಗಲಾಡಿಸಲು ಬಸವಣ್ಣನವರು ಇಷ್ಟಲಿಂಗ ದೀಕ್ಷೆ ಕೊಟ್ಟರು. ಮಹಿಳೆಯರಿಗೆ ಸ್ವಾತಂತ್ರ್ಯ ಕಲ್ಪಿಸಿಕೊಟ್ಟರು. ಅಂತರ್‌ಜಾತೀಯ ವಿವಾಹ ಮಾಡಿದರು. ತಾರತಮ್ಯ ರಹಿತ ಸಮಾಜ ನಿರ್ಮಾಣ ಮಾಡಿದರು ಎಂದು ಡಾ. ತೋಂಟದ ಸಿದ್ಧರಾಮ ಶ್ರೀಗಳು ನುಡಿದರು.

■ **ವಿಜಯಸಾಕ್ಷಿ ಸುದ್ದಿ, ಗದಗ**

12ನೇ ಶತಮಾನದಲ್ಲಿ ಜನಸಾಮಾನ್ಯರ ಬದುಕು ಶೋಚನೀಯವಾಗಿತ್ತು. ಬಸವಾದಿ ಶರಣರ ಕಾಯಕ, ದಾಸೋಹ, ಸಮಾನತೆ ಇಂದು ಬಹಳ ಮುಖ್ಯ ಎಂದು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ನುಡಿದರು.

ಲಿಂಗಾಯತ ಪ್ರಗತಿಶೀಲ ಸಂಘದ 2784ನೇ ಶಿವಾನುಭವ ಕಾರ್ಯಕ್ರಮದಲ್ಲಿ ಶ್ರೀಗಳು ಮಾತನಾಡಿದರು.

ಉಪನ್ಯಾಸಕರಾಗಿ ಆಗಮಿಸಿದ ಶಿರಹಟ್ಟಿಯ ಎಫ್.ಎಂ. ಡಬಾಲಿ ಕಾಲೇಜಿನ ಬಿ.ಆಯ್. ಶಿರುಂದ ಮಾತನಾಡಿ, ರಾಜ್ಯ ಸಾಮ್ರಾಜ್ಯದ ಕಾಲದಲ್ಲಿ ರಕ್ಷಣೆಗಾಗಿ, ಕಾಲ್ದಳ, ನೌಕಾದಳ, ಗಜದಳ ನಿಂತಿರುತ್ತಿದ್ದವು. ಹಾಗೆಯೇ ಸಮಸಮಾಜದ ರಕ್ಷಣೆಗಾಗಿ ಅಂದು ಶರಣರು, ಇಂದು ಮಠಾಧೀಶರು, ಜಗದ್ಗುರುಗಳು ಅವಿರತವಾಗಿ ಪರಿಶ್ರಮಿಸುತ್ತಿದ್ದಾರೆ. ತನ್ನನ್ನು ತಾನು ಅರಿತು, ಅಹಂಕಾರವನ್ನು ಮರೆತು, ನೈಜ ಬದುಕಿನ ವ್ಯಕ್ತಿತ್ವವೇ ಶರಣ. ಅತ್ಯಲ್ಪ ಅವಧಿಯಲ್ಲಿ ಸಮಾಜದಲ್ಲಿನ ಮೂಲಭೂತ ಮೌಢ್ಯದಲ್ಲಿ ಬದಲಾವಣೆ ತರುವುದೇ ಕ್ರಾಂತಿ ಎಂದರು.

ಕಲ್ಲು ನಾಗರ ಮನೆಗೆ ತಂದರೆ ನಡೆಯುತ್ತದೆ. ನಿಜ ನಾಗರ ತಾನಾಗಿಯೇ ಬಂದರೆ ನಡೆಯುವುದಿಲ್ಲ. ಬಾವಿಯನ್ನು ತೋಡಿ ನೀರು ತರಿಸಲು ಅಸ್ಪ್ರಶ್ಯ ಬೇಕು. ಅದೇ ಬಾವಿಯ ನೀರು ಕುಡಿಯಲು ಬೇಡ. ಗ್ರಹಣ ಬಂದಾಗ ನೀರು ಚೆಲ್ಲುತ್ತಾರೆ. ಆದರೆ ತುಪ್ಪ ಚೆಲ್ಲುವುದಿಲ್ಲ ಏಕೆ? ಇಂಥ ಅನೇಕ ಮೌಢ್ಯಗಳನ್ನು ತೊಡೆದು ಹಾಕಲು ಶರಣರು ವಚನಗಳ ಮೂಲಕ ಸಾಮಾಜಿಕ ಕಲ್ಯಾಣ ಮಾಡಲು ಕ್ರಾಂತಿ ಮಾಡಿದರು ಎಂದು ಹೇಳಿದರು. ವಚನ ಸಂಗೀತ ಸೇವೆಯನ್ನು ಗುರುನಾಥ್ ಸುತಾರ ಹಾಗೂ ಮೃತ್ಯುಂಜಯ ಹಿರೇಮಠ ನಡೆಸಿಕೊಟ್ಟರು. ಧಾರ್ಮಿಕ ಗ್ರಂಥಪಠಣವನ್ನು ಮೇಘಾ ಚಂದಪ್ಪನವರ, ವಚನ ಚಿಂತನವನ್ನು ಪೂಜಾ ಹೊನ್ನಳ್ಳಿ ನಡೆಸಿಕೊಟ್ಟರು. ದಾಸೋಹ ಸೇವೆಯನ್ನು ಚನ್ನಬಸಪ್ಪ ಶರಣಬಸಪ್ಪ ನಂದಿಹಾಳ ಸಿದ್ದಲಿಂಗೇಶ್ವರ ಆಯಿಲ್ ಮಿಲ್ ಗಜೇಂದ್ರಗಡ ಇವರು ವಹಿಸಿದ್ದರು. ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಬಾಲಚಂದ್ರ ಭರಮಗೌಡ್ರ, ಉಪಾಧ್ಯಕ್ಷ ಡಾ. ಉಮೇಶ ಪುರದ, ವಿದ್ಯಾ ಪ್ರಭು ಗಂಜಿಹಾಳ, ಕಾರ್ಯದರ್ಶಿ ವೀರಣ್ಣ ಗೋಟಡಕಿ, ಸಹಕಾರ್ಯದರ್ಶಿ ಸೋಮಶೇಖರ ಪುರಾಣಿಕ, ನಾಗರಾಜ್ ಹಿರೇಮಠ, ಸಂಘಟನಾ ಕಾರ್ಯದರ್ಶಿ ಮಹೇಶ್ ಗಾಣಿಗೇರ, ಕೋಶಾಧ್ಯಕ್ಷ ಬಸವರಾಜ ಕಾಡಪ್ಪನವರ, ಶಿವಾನುಭವ ಸಮಿತಿಯ ಸಹ ಚೇರ್ಮನ್ ಶಿವಾನಂದ ಹೊಂಬಳ, ಶ್ರೀಮಠದ ಸದ್ಭಕ್ತರು ಉಪಸ್ಥಿತರಿದ್ದರು.

ಶಿವಾನುಭವ ಸಮಿತಿಯ ಚೇರ್ಮನ್ ಐ.ಬಿ. ಬೆನಕೊಪ್ಪ ಸ್ವಾಗತಿಸಿದರು. ವಿದ್ಯಾ ಪ್ರಭು ಗಂಜಿಹಾಳ ಕಾರ್ಯಕ್ರಮ ನಿರೂಪಿಸಿದರು.

# ಲಕ್ಕುಂಡಿಯಲ್ಲಿ ವಿಬಿಜಿ ರಾಮಜೀ ಜನಜಾಗೃತಿ ಪಾದಯಾತ್ರೆ




■ **ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ರಾಜ್ಯ ಕಾಂಗ್ರೆಸ್ ಸರ್ಕಾರ ಆರ್ಥಿಕವಾಗಿ ದಿವಾಳಿಯಾಗಿದ್ದು, ಕೇಂದ್ರ ಸರ್ಕಾರ ಜಾರಿಗೆ ತಂದಿರುವ ವಿಬಿಜಿ ರಾಮಜೀ ಕಾಯ್ದೆಯ ನಿಯಮದಂತೆ ರಾಜ್ಯ ಸರ್ಕಾರವು ಶೇ.40ರಷ್ಟು ಪಾಲನ್ನು ಭರಿಸಬೇಕಾಗಿರುವ ಹಿನ್ನೆಲೆಯಲ್ಲಿ ಜನರಲ್ಲಿ ಯೋಜನೆ ಕುರಿತು ತಪ್ಪು ಭಾವನೆಗಳನ್ನು ಮೂಡಿಸಲಾಗುತ್ತಿದೆ ಎಂದು ಮಾಜಿ ಸಚಿವರು ಹಾಗೂ ಶಾಸಕ ಸಿ ಸಿ ಪಾಟೀಲ್ ಆರೋಪಿಸಿದರು.

ಇಲ್ಲಿನ ವಿರುಪಾಕ್ಷೇಶ್ವರ ದೇವಸ್ಥಾನ ಪ್ರಾಂಗಣದಲ್ಲಿ ಲಕ್ಕುಂಡಿ ಬಿ.ಜೆ.ಪಿ. ಮಂಡಲ ವತಿಯಿಂದ ಹಮ್ಮಿಕೊಂಡಿದ್ದ ವಿಬಿಜಿ ರಾಮಜೀ ಯೋಜನೆ ಕುರಿತ ಜನಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಈ ಕಾಯ್ದೆಯನ್ನು ವಿರೋಧಿಸುವ ಉದ್ದೇಶದಿಂದಲೇ 11 ದಿನಗಳ ಅಧಿವೇಶನ ನಡೆಸಿ ಕೋಟ್ಯಾಂತರ ರೂಪಾಯಿ ಖರ್ಚು ಮಾಡಲಾಗಿದೆ. ಕೇಂದ್ರ ಸರ್ಕಾರದ ಕಾಯ್ದೆಯನ್ನು ಬದಲಾಯಿಸಲು ಸಾಧ್ಯವಿಲ್ಲವೆಂಬುದು ಗೊತ್ತಿದ್ದರೂ ಅನಗತ್ಯವಾಗಿ ವಿರೋಧಿಸುವುದು ಹತಾಶೆ ಮನೋಭಾವನೆಯಾಗಿದೆ ಎಂದರು.

ಈ ಹಿಂದೆ ಕಾಂಗ್ರೆಸ್ ಸರ್ಕಾರವು ಇದೇ ಯೋಜನೆಗೆ ಸುಮಾರು 20 ಬಾರಿ ಹೆಸರು ಬದಲಾಯಿಸಿದ್ದು ಜನರಿಗೆ ಇನ್ನೂ ನೆನಪಿದೆ ಎಂದು ಹೇಳಿದರು.

ಕೇಂದ್ರ ಸರ್ಕಾರವು ಯೋಜನೆಗೆ ಅನುದಾನವನ್ನು 30 ಸಾವಿರ ಕೋಟಿಯಿಂದ 90 ಸಾವಿರ ಕೋಟಿಗೆ ಹೆಚ್ಚಿಸಿದೆ. ಭ್ರಷ್ಟಾಚಾರ ತಡೆಗಟ್ಟಲು ಕಾರ್ಮಿಕರಿಗೆ ಬಯೋಮೆಟ್ರಿಕ್ ವ್ಯವಸ್ಥೆ ಜಾರಿಗೊಳಿಸಲಾಗಿದೆ ಎಂದು ವಿವರಿಸಿದರು.

ರಾಜ್ಯ ಕಾಂಗ್ರೆಸ್ ಸರ್ಕಾರವು ಗ್ಯಾರಂಟಿ ಯೋಜನೆಗಳಿಗೆ ಹಣ ಕ್ರೋಢೀಕರಿಸಲು ಸಾಧ್ಯವಾಗದೆ, ಕೇಂದ್ರದ ಜನಪರ ಯೋಜನೆಗಳನ್ನು ದಾರಿ ತಪ್ಪಿಸುತ್ತಿದೆ ಎಂದು ಆರೋಪಿಸಿದ ಅವರು, ಸಿದ್ಧರಾಮಯ್ಯ ಸರ್ಕಾರವು 8 ಲಕ್ಷ ಕೋಟಿ ಸಾಲದಲ್ಲಿದೆ ಎಂದರು.

ಬಿ.ಜೆ.ಪಿ ಧುರೀಣ ವಸಂತ ಮೇಟಿ, ಮಾಜಿ ಯೋಧ ದತ್ತಣ್ಣ ಜೋಶಿ, ಅಧ್ಯಕ್ಷತೆ ವಹಿಸಿದ್ದ ಲಕ್ಕುಂಡಿ ಬಿ.ಜೆ.ಪಿ ಮಂಡಲದ ಅಧ್ಯಕ್ಷ ಪ್ರಕಾಶ ಅರಹುಣಶಿ ಹಾಗೂ ಪ್ರಧಾನ ಕಾರ್ಯದರ್ಶಿ ಶರಣಪ್ಪ ಕುದರಿ ಮಾತನಾಡಿದರು.

ಅತ್ತಿಮಬ್ಬೆ ಮಹಾದ್ವಾರದಿಂದ ವಿರುಪಾಕ್ಷೇಶ್ವರ ದೇವಸ್ಥಾನವರೆಗೆ ಪಾದಯಾತ್ರೆ ನಡೆಸಲಾಯಿತು.

ಜಿ.ಪಂ ಮಾಜಿ ಸದಸ್ಯ ಎಸ್.ಬಿ. ಕಲಕೇರಿ, ಬಿ.ಜೆ.ಪಿ ಯುವ ಧುರೀಣ ಉಮೇಶಗೌಡ ಪಾಟೀಲ, ಪ್ರದೀಪ ನವಲಗುಂದ, ಅಶೋಕ ಬೂದಿಹಾಳ, ತಾ.ಪಂ ಮಾಜಿ ಸದಸ್ಯ ಮಹೇಶ ಮುಸ್ಕಿನಭಾವಿ, ಫಕ್ಕೀರಮ್ಮ ಬೇಲೇರಿ ವೇದಿಕೆಯಲ್ಲಿ ಉಪಸ್ಥಿತರಿದ್ದರು. ತಾ.ಪಂ ಮಾಜಿ ಸದಸ್ಯ ಪ್ರಲಾದ ಹೊಸಳ್ಳಿ ನಿರೂಪಿಸಿದರು. ಎಸ್.ಸಿ. ಮೋರ್ಚಾ ಕಾರ್ಯದರ್ಶಿ ಮರಿಯಪ್ಪ ವಡ್ಡರ ವಂದಿಸಿದರು.

### ಮಾದರಿ ಕನ್ನಡ ಗಂಡುಮಕ್ಕಳ ಶಾಲೆಯ ವಾರ್ಷಿಕ ಸ್ನೇಹ ಸಮ್ಮೇಳನ

# ಅಜ್ಞಾನದ ಕತ್ತಲೆ ಕಳೆಯುವವನೇ ಶಿಕ್ಷಕ



ಎಸ್.ಸಿ. ಬಡ್ನಿ ಮಾತನಾಡಿ, ಸರಕಾರಿ ಮಾದರಿ ಕನ್ನಡ ಗಂಡು ಮಕ್ಕಳ ಶಾಲೆ ನಂ. 1ರ ಪ್ರಧಾನ ಗುರು ಪಿ.ಬಿ. ಕೆಂಚನಗೌಡ್ರ ಅವರ ಸೇವೆ ಅಪಾರವಾದದ್ದು.

ಇಂತಹ ಶಿಕ್ಷರನ್ನು ಪಡೆದ ನಾವೇ ಧನ್ಯರು. ಶಾಲೆಯು ಎಸ್‌ಡಿಎಂಸಿ ಅಧ್ಯಕ್ಷ ವಿ.ಡಿ. ಸಿದ್ದನಗೌಡ್ರ ಸಹಾಯ-ಸಹಕಾರದಿಂದ ಸಾಕಷ್ಟು ಅಭಿವೃದ್ಧಿ ಹೊಂದಿದ್ದು, ಗುರು ಬಳಗ ಉತ್ತಮ ಶಿಕ್ಷಣ ನೀಡುವ ಮೂಲಕ ಶಿಕ್ಷಣ ಕ್ರಾಂತಿ ಮಾಡುತ್ತಿದೆ ಎಂದರು.

■ **ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಅಜ್ಞಾನದ ಕತ್ತಲೆ ಕಳೆದು ಸುಜ್ಞಾನದ ಬೆಳಕು ನೀಡುವವರೇ ಶಿಕ್ಷಕರು ಎಂದು ನಾಗರಾಜ ದೇಶಪಾಂಡೆ ಹೇಳಿದರು.

ಅವರು ಪಟ್ಟಣದ ಸರಕಾರಿ ಮಾದರಿ ಕನ್ನಡ ಗಂಡುಮಕ್ಕಳ ಶಾಲೆಯ ವಾರ್ಷಿಕ ಸ್ನೇಹ ಸಮ್ಮೇಳನ, 7ನೇ ತರಗತಿ ಮಕ್ಕಳ ಬೀಳ್ಕೊಡುಗೆ ಮತ್ತು ಸರಸ್ವತಿ ಪೂಜಾ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ಪ್ರತಿಯೊಬ್ಬ ವ್ಯಕ್ತಿಗೂ ಗುರು ಬೇಕು. ಪ್ರಾಥಮಿಕ ಹಂತದಲ್ಲಿ ಶಿಕ್ಷಕರು ನೀಡುವ ಶಿಕ್ಷಣವೇ ಮಕ್ಕಳಿಗೆ ಭದ್ರ ಬುನಾದಿಯಾಗುತ್ತದೆ. ಮಕ್ಕಳು ಪ್ರಾಥಮಿಕ ಹಂತದಲ್ಲಿ ಗುರುಗಳ ಮಾತುಗಳನ್ನು ಪಾಲಿಸುವುದರಿಂದ ಭವಿಷ್ಯದ ಉತ್ತಮ ಪ್ರಜೆಗಳಾಗಿ ಹೊರ ಹೊಮ್ಮಲು ಸಾಧ್ಯವಾಗುತ್ತದೆ ಎಂದರು.

ನಿವೃತ್ತ ಆರ್‌ಟಿಓ ಬಿ.ಡಿ. ಹರ್ತಿ ಮಾತನಾಡಿ, ನಾನೂ ಸಹ ಈ ಶಾಲೆಯ ಹಳೆ ವಿದ್ಯಾರ್ಥಿಯಾಗಿದ್ದು, ಈ ಶಾಲಾ ಮಕ್ಕಳ ಶೈಕ್ಷಣಿಕ ಅಭಿವೃದ್ಧಿ ಸಾಕಷ್ಟು ಪ್ರಗತಿ ಕಂಡಿದೆ. ಮಕ್ಕಳು ಗುರುಗಳ ಮಾತನ್ನು ಚಾಚೂ ತಪ್ಪದೇ ಪಾಲಿಸಬೇಕು ಎಂದರು.

ಎಸ್‌ಡಿಎಂಸಿ ಅಧ್ಯಕ್ಷ ವಿ.ಡಿ. ಸಿದ್ದನಗೌಡ್ರ ಮಾತನಾಡಿ, ನಾನೂ ಶಾಲೆಯಲ್ಲಿ ಸುಮಾರು ಹತ್ತು ವರ್ಷಗಳ ಸೇವೆ ಸಲ್ಲಿಸುವ ಭಾಗ್ಯ ದೊರೆತ್ತಿದ್ದು ಪೂರ್ವ ಜನ್ಮದ ಪುಣ್ಯ. ನಮ್ಮ ಶಾಲೆಯ ಗುರು ಬಳಗದ ಸೇವೆ ನಿಜಕ್ಕೂ ಶ್ಲಾಘನೀಯ ಎಂದರು.

ಅಧ್ಯಕ್ಷತೆಯನ್ನು ಎಸ್‌ಡಿಎಂಸಿ ಅಧ್ಯಕ್ಷ ವಿ.ಡಿ. ಸಿದ್ದನಗೌಡ್ರ ವಹಿಸಿದ್ದರು. ಪ್ರಧಾನ ಗುರು ಪಿ.ಬಿ. ಕೆಂಚನಗೌಡ್ರ, ಬಿ.ಡಿ. ಹರ್ತಿ, ಇಮಾಮಸಾಬ ಶೇಖ, ಎಸ್.ಸಿ. ಬಡ್ನಿ, ನಾಗರಾಜ ದೇಶಪಾಂಡೆ, ಜಿ.ಎಂ. ಗಾಡಿ, ಬಿ.ಎಲ್. ಜಾಧಾವ, ಮಂಜುನಾಥ ಗುಲಗಂಜಿ, ರಮೇಶ ಮ್ಯಾಗೇರಿ, ಕೆ.ಎಂ. ಹೆರಕಲ್, ಎಂ.ಎಂ. ಮೇಗಲಮನಿ, ವಿ.ಎಂ. ಕಂಠಿ, ಎಚ್.ಆರ್. ಭಜಂತ್ರಿ, ಎಸ್.ಎಚ್. ಉಪ್ಪಾರ, ಟಿ.ವೀಣಾ, ಎಸ್.ಡಿ. ಪಂಡಿತ, ಎಸ್.ವಿ. ಹಿರೇಮಠ, ಶೈಲಾ ದೊಡ್ಡಮನಿ, ತ್ರಿವೇಣಿ ಬಡ್ನಿ, ರತ್ನಾ ಬಬಲಿಯವರ, ಶಬಾನಾ ಡಾಲಾಯತ, ಕವಿತಾ ಬಿನ್ನಾಳ ಇದ್ದರು.

### ಪತ್ರಿಕಾಗೋಷ್ಠಿಯಲ್ಲಿ ವಿಧಾನ ಪರಿಷತ್ ವಿರೋಧ ಪಕ್ಷದ ಮುಖ್ಯ ಸಚೇತಕ ಎನ್. ರವಿಕುಮಾರ್ ಆರೋಪ

# ಕಾಂಗ್ರೆಸ್ ರಾಜ್ಯದ ಜನತೆಗೆ ಸಮಸ್ಯೆಗಳನ್ನು ನಿರ್ಮಿಸಿದ ಸರ್ಕಾರ




ರಾಜ್ಯಾದ್ಯಂತ ಬಿಪಿಎಲ್ ಕಾರ್ಡ್‌ಗಳನ್ನು ರದ್ದುಪಡಿಸಲಾಗಿದೆ. ಇದು ಅಲ್ಪಸಂಖ್ಯಾತರ ತುಷ್ಟೀಕರಣ ಸರ್ಕಾರವಾಗಿದೆ. ರೈತರ ಜಮೀನು, ಮಠ-ಮಂದಿರಗಳ ಆಸ್ತಿಗಳನ್ನು ವಕ್ಫ್ ಆಸ್ತಿಗಳಾಗಿ ಪರಿವರ್ತಿಸಲು ಬಹುದೊಡ್ಡ ಹುನ್ನಾರ ನಡೆಯುತ್ತಿದೆ. ಇದು ರೈತರ ವಿರೋಧಿ ಸರ್ಕಾರವಾಗಿದೆ. ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆ ರದ್ದು, ಬೆಂಬಲ ಬೆಲೆ ನೀಡದಿರುವುದು, ರೈತ ವಿದ್ಯಾನಿಧಿ ಸ್ಥಗಿತ, ರೈತ ವಿರೋಧಿ ನೀತಿಗಳು ಎಂದು ಎನ್. ರವಿಕುಮಾರ್ ಆಕ್ರೋಶ ವ್ಯಕ್ತಪಡಿಸಿದರು.

■ **ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ರಾಜ್ಯದ ಕಾಂಗ್ರೆಸ್ ಸರ್ಕಾರಕ್ಕೆ 1000 ದಿನಗಳ ಸಂಭ್ರಮಾಚರಣೆ ಮಾಡಲು ಯಾವುದೇ ನೈತಿಕತೆ ಇಲ್ಲ. ಇದು ರಾಜ್ಯದ ಜನತೆಗೆ ಸಾವಿರ ಸಮಸ್ಯೆಗಳ ನಿರ್ಮಿಸಿದ ಸರ್ಕಾರವಾಗಿದೆ ಎಂದು ವಿಧಾನ ಪರಿಷತ್ ವಿರೋಧ ಪಕ್ಷದ ಮುಖ್ಯ ಸಚೇತಕ ಎನ್. ರವಿಕುಮಾರ್ ಆರೋಪಿಸಿದರು.

ಅವರು ಶನಿವಾರ ಶಿರಹಟ್ಟಿಯ ಶಾಸಕರ ಕಚೇರಿಯಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

ಸ್ವತಃ ಮುಖ್ಯಮಂತ್ರಿಗಳು ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ ಹಗರಣದಲ್ಲಿ ಭಾಗಿಯಾಗಿ ಸುಮಾರು 14 ಸೈಟುಗಳನ್ನು ವಾಪಸ್ ನೀಡಿರುವುದು ನೈತಿಕ ಪತನಕ್ಕೆ ಉದಾಹರಣೆ. ವಾಲ್ಮೀಕಿ ನಿಗಮದ ಹಗರಣದ ಕುರಿತು ಸದನದಲ್ಲೇ ನೂರಾರು ಕೋಟಿ ರೂಪಾಯಿ ಅವ್ಯವಹಾರ ನಡೆದಿದೆ ಎಂದು ಮುಖ್ಯಮಂತ್ರಿ ಒಪ್ಪಿಕೊಂಡಿದ್ದಾರೆ. ಜೊತೆಗೆ ಅಬಕಾರಿ ಇಲಾಖೆಯಲ್ಲಿ ಸುಮಾರು 6 ಸಾವಿರ ಕೋಟಿ ರೂ ಹಗರಣ ನಡೆದಿದ್ದರೂ ಸಚಿವರು ರಾಜೀನಾಮೆ ನೀಡಿಲ್ಲ. ವೈನ್‌ಶಾಪ್ ಅಸೋಸಿಯೇಷನ್‌ಗಳು ದೂರು ಹಾಗೂ ಸಾಕ್ಷಿ ನೀಡಿದ್ದರೂ ಯಾವುದೇ ಕ್ರಮ ಕೈಗೊಳ್ಳಲಿಲ್ಲ.

ಲೋಕಾಯುಕ್ತ ದಾಳಿಯಲ್ಲಿ ಅಧಿಕಾರಿಗಳು ಲಂಚದ ಹಣ ಸಮೇತ ಬಂಧಿತರಾದರೂ ಸಚಿವರು ಅದೇ ಖಾತೆಯಲ್ಲಿ ಮುಂದುವರಿದಿರುವುದು ದುರಂತವಾಗಿದೆ. ಮೈಸೂರಿನಲ್ಲಿ ವೈನ್ ಶಾಪ್ ನಡೆಸಲು ಪ್ರತಿ ತಿಂಗಳು ಮಂತ್ಲಿ ಫಿಕ್ಸ್ ಮಾಡಿರುವುದು ಭ್ರಷ್ಟಾಚಾರದ ಪರಾಕಾಷ್ಠೆಯನ್ನು ತೋರಿಸುತ್ತಿದೆ. ಸುಮಾರು 37,000 ಕೋಟಿ ಗುತ್ತಿಗೆದಾರರ ಬಾಕಿ ಹಣ ಪಾವತಿಸಿಲ್ಲ. ಲೋಕಾಯುಕ್ತ ನ್ಯಾಯಮೂರ್ತಿ ಬಿ. ಬೀರಪ್ಪ ಅವರೇ ಸರ್ಕಾರದಲ್ಲಿ ಶೇ. 63ಕ್ಕೂ ಹೆಚ್ಚು ಭ್ರಷ್ಟಾಚಾರ ಇದೆ ಎಂದು ಹೇಳಿಕೆ ನೀಡಿರುವುದೇ ಮತ್ತೊಂದು ಸಾಕ್ಷಿಯಾಗಿದೆ.

ಗೃಹಲಕ್ಷ್ಮೀ ಯೋಜನೆಯಲ್ಲಿ ಸಾವಿರಾರು ಕೋಟಿ ಹಗರಣ ನಡೆದಿದೆ. 2025 ಫೆಬ್ರವರಿ-ಮಾರ್ಚ್ ತಿಂಗಳ ಕಂತುಗಳನ್ನು ಮಹಿಳೆಯರಿಗೆ ನೀಡದೇ ಸುಮಾರು 5000 ಕೋಟಿ ಅವ್ಯವಹಾರ ನಡೆದಿದೆ. ಚುನಾವಣೆ ಬಂದಾಗ ಮಾತ್ರ ಹಣ ಜಮೆ ಮಾಡುತ್ತಾರೆ, ಹೀಗಾಗಿ ಇದು ಗೃಹಲಕ್ಷ್ಮೀ ಅಲ್ಲ, ಎಲೆಕ್ಷನ್ ಲಕ್ಷ್ಮೀಯಾಗಿದೆ ಎಂದರು.

ತುಂಗಭದ್ರ ಡ್ಯಾಂ ದುರಸ್ತಿ ಕಾಮಗಾರಿಗೆ ಹಣ ನೀಡಿಲ್ಲ. ರಾಜ್ಯದಲ್ಲಿ ಡ್ರಗ್ಸ್ ಹಾವಳಿ ಹೆಚ್ಚಾಗಿದೆ. ಜೈಲುಗಳು ಅರಮನೆಗಳಾಗಿ ಮಾರ್ಪಟ್ಟಿವೆ. ಬೆಂಗಳೂರು, ವಿಜಯಪುರ, ಬೀದರ್, ಮಂಗಳೂರು ನಗರಗಳಲ್ಲಿ ಬ್ಯಾಂಕ್ ದರೋಡೆ ಪ್ರಕರಣಗಳು ಹೆಚ್ಚಿವೆ. ಪೊಲೀಸರೇ ಅನೇಕ ದರೋಡೆ ಪ್ರಕರಣಗಳಲ್ಲಿ ಭಾಗಿಯಾಗುತ್ತಿದ್ದಾರೆ. ಮೈಸೂರು ಹಾಗೂ ಬೆಂಗಳೂರಿನಲ್ಲಿ ಬೇರೆ ರಾಜ್ಯದ ಪೊಲೀಸರು ಬಂದು ಡ್ರಗ್ಸ್ ಫ್ಯಾಕ್ಟರಿಗಳ ಮೇಲೆ ದಾಳಿ ಮಾಡಿರುವುದು ನಾಚಿಕೆಗೇಡಿನ ಸಂಗತಿ ಎಂದರು.

ಸಿಲಿಕಾನ್ ಸಿಟಿ ಬೆಂಗಳೂರು ಗುಂಡಿಗಳ ನಗರವಾಗಿದೆ. 350ಕ್ಕೂ ಹೆಚ್ಚು ಅಗತ್ಯ ವಸ್ತುಗಳ ಬೆಲೆ ಏರಿಕೆ ಮಾಡಿದ್ದಾರೆ. ಜನನ ಪ್ರಮಾಣ ಪತ್ರದಿಂದ ಹಿಡಿದು ಮರಣ ಪ್ರಮಾಣ ಪತ್ರದವರೆಗೆ ಎಲ್ಲ ದರಗಳನ್ನು ಹೆಚ್ಚಿಸಿದ್ದಾರೆ. ಇವುಗಳ ಜೊತೆಗೆ 54 ಮಂದಿಗೆ ಕ್ಯಾಬಿನೆಟ್ ದರ್ಜೆ ನೀಡಿ ನೂರಾರು ಕೋಟಿ ಅನಗತ್ಯ ವೆಚ್ಚ ಮಾಡಿದ್ದಾರೆ. ಹೀಗಾಗಿ ಮೋಜು-ಮಸ್ತಿ, ಭ್ರಷ್ಟಾಚಾರ ಮತ್ತು ಕಾನೂನು ಸುವ್ಯವಸ್ಥೆಯನ್ನು ಸಂಪೂರ್ಣ ನಿರ್ಲಕ್ಷಿಸಿರುವ ಈ ಕಾಂಗ್ರೆಸ್ ಸರ್ಕಾರಕ್ಕೆ 1000 ದಿನಗಳ ಸಂಭ್ರಮಾಚರಣೆ ಮಾಡಲು ಯಾವುದೇ ನೈತಿಕತೆ ಇಲ್ಲ ಎಂದು ಕಾಂಗ್ರೆಸ್ ಸರಕಾರದ ವಿರುದ್ಧ ಹರಿಹಾಯ್ದರು.

ಈ ಸಂದರ್ಭದಲ್ಲಿ ಜಿಲ್ಲಾ ಅಧ್ಯಕ್ಷ ರಾಜು ಕುರುಡಗಿ, ಶಾಸಕ ಡಾ. ಚಂದ್ರು ಲಮಾಣಿ, ಸಂತೋಷ ಹಡಪದ, ಸಂತೋಷ ಬಿರಾದಾರ್, ಬಿಜೆಪಿ ನಗರ ಘಟಕದ ಅಧ್ಯಕ್ಷ ನಾಗರಾಜ್ ಲಕ್ಕುಂಡಿ, ಜಿಲ್ಲಾ ಪ್ರ.ಕಾ. ಫಕ್ಕೀರೇಶ ರಟ್ಟಿಹಳ್ಳಿ, ತಾಲೂಕಾ ಮಹಿಳಾಧ್ಯಕ್ಷೆ ನಂದಾ ಪಲ್ಲೇದ, ಶಂಕರ ಮರಾಠೆ, ಸಂದೀಪ ಕಪ್ಪತ್ತನವರ, ರಾಮಣ್ಣ ಕಂಬಳಿ, ವಿನಾಯಕ ಭಿಡವೆ, ಸಂತೋಷ ತೋಡೆಕಾರ ಮುಂತಾದವರು ಉಪಸ್ಥಿತರಿದ್ದರು.

# ಶ್ರೀಕ್ಷೇತ್ರ ವರವಿ ಮೌನೇಶ್ವರ ದೇವಸ್ಥಾನದಲ್ಲಿ ಮಹಾ ಶಿವರಾತ್ರಿ ಮಹೋತ್ಸವ - 1001 ರುದ್ರಾಭಿಷೇಕ

■ **ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯ ಶಿರಹಟ್ಟಿ ತಾಲೂಕಿನಲ್ಲಿ ಇರುವ ಶ್ರೀಕ್ಷೇತ್ರ ವರವಿ ಮೌನೇಶ್ವರ ದೇವಸ್ಥಾನದಲ್ಲಿ ಮಹಾ ಶಿವರಾತ್ರಿ ಮಹೋತ್ಸವ-2026 ಅಂಗವಾಗಿ ವಿಶೇಷ ಪೂಜಾ ಕಾರ್ಯಕ್ರಮಗಳು ಭಕ್ತಿಭಾವದಿಂದ ಜರುಗಲಿವೆ.

ದಿ. 15-02-2026 ರವಿವಾರ ರಾತ್ರಿ 11 ಗಂಟೆಗೆ 1001 ರುದ್ರಾಭಿಷೇಕ ಪ್ರಾರಂಭಗೊಂಡು, ದಿ. 16-02-2026 ಸೋಮವಾರ ಬೆಳಿಗ್ಗೆ 5.30ಕ್ಕೆ ಮಹಾಮಂಗಳಾರತಿ ಸಂಪನ್ನಗೊಂಡು ನಂತರ ಮಹಾಪ್ರಸಾದ ವಿತರಣೆ ನಡೆಯಲಿದೆ.

ರುದ್ರಾಭಿಷೇಕಕ್ಕೆ ಹೆಸರು ನೋಂದಾಯಿಸಿದ ಭಕ್ತರಿಗೆ ವಿಶೇಷ ದರ್ಶನ ವ್ಯವಸ್ಥೆ ಕಲ್ಪಿಸಲಾಗಿದೆ. ಸಾಯಂಕಾಲ 5.15ಕ್ಕೆ ಮಹಾ ಶಿವರಾತ್ರಿ ಮಹೋತ್ಸವ-2026 ಉದ್ಘಾಟನಾ ಸಮಾರಂಭ ನಡೆಯಲಿದೆ. ಕಾರ್ಯಕ್ರಮಕ್ಕೆ ಶ್ರೀಕ್ಷೇತ್ರ ವರವಿ ಮೌನೇಶ್ವರ ಮಠದ ಪೂಜ್ಯ ಮೌನೇಶ್ವರ ಮಹಾಸ್ವಾಮಿಗಳು, ಸಿಂದಗಿ ಮೂರುಜಾವದೀಶ್ವರ ಮಠದ ರಾಮಚಂದ್ರ ಮಹಾಸ್ವಾಮಿಗಳು, ಗಿಣಗೇರಿ ಮದಾನೆಗುಂದಿ ಸರಸ್ವತಿ ಪೀಠದ ಶ್ರೀಕಂಠ ಮಹಾಸ್ವಾಮಿಗಳು ಸೇರಿದಂತೆ ವಿಶ್ವಕರ್ಮ ಸಮಾಜದ ಮಠಾಧಿಪತಿಗಳು ದಿವ್ಯ ಸಾನಿಧ್ಯ ವಹಿಸಲಿದ್ದಾರೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶ್ರೀಮಠದ ಟ್ರಸ್ಟ್ ಅಧ್ಯಕ್ಷರಾದ ಮೋಹನ ನರಗುಂದ ವಹಿಸಲಿದ್ದು, ಶಿರಹಟ್ಟಿ ಹಾಗೂ ಮುಂಡರಗಿ ಮತಕ್ಷೇತ್ರದ ಶಾಸಕ ಡಾ|| ಚಂದ್ರು ಲಮಾಣಿ ಉದ್ಘಾಟನೆ ನೆರವೇರಿಸಲಿದ್ದಾರೆ. ತಹಶೀಲ್ದಾರ್ ಕೆ. ರಾಘವೇಂದ್ರರಾವ್ ಸೇರಿದಂತೆ ಹಲವು ಗಣ್ಯರು ಹಾಗೂ ಜನಪ್ರತಿನಿಧಿಗಳು ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಸಾಂಸ್ಕೃತಿಕ ಸಂಭ್ರಮ ಸಂಜೆ 7 ಗಂಟೆಯಿಂದ ಇಡೀ ರಾತ್ರಿ ನಾಡಿನ ಹೆಸರಾಂತ ಹಾಗೂ ಉದಯೋನ್ಮುಖ ಸಂಗೀತ ಕಲಾವಿದರಿಂದ ಭಕ್ತಿ ರಸಮಯ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ. ಮುಂಡರಗಿಯ ಜೀ ಟಿವಿ ಸರಿಗಮಪ ಸೀಸನ್ 19ರ ಫೈನಲಿಸ್ಟ್ ನಯನಾ ಅಳವಂಡಿ ಸೇರಿದಂತೆ ಅನೇಕ ಕಲಾವಿದರು ಭಾಗವಹಿಸಲಿದ್ದಾರೆ.


ಈ ಕುರಿತು ಜಗದ್ಗುರು ಶ್ರೀ ಮೌನೇಶ್ವರ ದೇವಸ್ಥಾನ ಮತ್ತು ಮಠದ ವಿಕಾಸ ಟ್ರಸ್ಟ್ ಸಮಿತಿ ಅಧ್ಯಕ್ಷ ಮೋಹನ ನರಗುಂದ ಹಾಗೂ ಸದಸ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸತತ ಪ್ರಯತ್ನದಿಂದ ಯಶಸ್ಸು ಸಾಧ್ಯ

■ **ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಶಿಸ್ತು, ಸಮಯ, ಸತತ ಪ್ರಯತ್ನದಿಂದ ಯಶಸ್ಸು ಸಾಧಿಸಲು ಸಾಧ್ಯವಿದೆ ಎಂದು ನಿವೃತ್ತ ಡಿಡಿಪಿಐ ಎಂ.ಎ. ರಡ್ಡೇರ ಹೇಳಿದರು.

ಅವರು ಪಟ್ಟಣದ ಸರಕಾರಿ ಪ್ರೌಢಶಾಲೆ (ಆರ್‌ಎಂಎಸ್‌ಎ) ಯಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯ ಸಿದ್ಧತೆ ಕುರಿತು ಮಾತನಾಡಿ, ಪರೀಕ್ಷೆ ಬಗ್ಗೆ ಭಯ ಬೇಡ. ಪರೀಕ್ಷೆಯನ್ನು ಎಂದಿಗೂ ಒತ್ತಡದಿಂದ ಎದುರಿಸದೇ



ಅತ್ಯಂತ ಸಂಭ್ರಮದಿಂದ, ಸಂತೋಷಭರಿತವಾಗಿ ಎದುರಿಸಿ, ಸತತ ಪ್ರಯತ್ನಪಟ್ಟಲ್ಲಿ ಯಶಸ್ಸು ಕಟ್ಟಿಟ್ಟ ಬುತ್ತಿ ಎಂದರು.

ಶಾಲಾ ಪ್ರಧಾನ ಗುರು ಎಸ್.ಎಚ್. ಪೂಜಾರ, ಗೀತಾ ಪಾಟೀಲ, ನೂರಹ್ಮದ ನದಾಫ್, ವಿ.ಟಿ. ಅಂಗಡಿ, ಗೀತಾ ಕುಂದರಗಿ, ಎಸ್.ವಿ. ತಿಮ್ಮಾಪೂರ, ಬಸವರಾಜ ಗೌರಿಮನಿ ಹಾಗೂ ಮಕ್ಕಳು ಇದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka